ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU
ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 33 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಮಂಗಳವಾರ ದಿನಾಂಕ : 11-08-2026 ಪುಟ : 04 ಬೆಲೆ : 2-00

## ಕಾವೇರಿ ವಿವಾದ

### ತಮಿಳುನಾಡು ಅರ್ಜಿ; ಆಗಸ್ಟ್ 13ಕ್ಕೆ ಸುಪ್ರೀಂ ಕೋರ್ಟ್ ವಿಚಾರಣೆ

ನವದೆಹಲಿ: ಕರ್ನಾಟಕದಿಂದ ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀಡಿರುವ ಆದೇಶ ಜಾರಿಗೊಳಿಸಲು ನಿರ್ದೇಶನ ನೀಡುವಂತೆ ಕೋರಿ ಸಲ್ಲಿಸಿರುವ ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಆಗಸ್ಟ್ 13ರಂದು ನಡೆಸಲಿದೆ.

ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜಾಯ್ಮಾಲ್ಯ ಬಾಗ್ಚಿ ಮತ್ತು ವಿ. ಮೊಹನಾ ಅವರನ್ನೊಳಗೊಂಡ ಪೀಠದ ಮುಂದೆ ತಮಿಳುನಾಡು ಸರ್ಕಾರದ ಪರ ಹಿರಿಯ ವಕೀಲ ಸಿ.ಎಸ್. ವೈದ್ಯನಾಥನ್ ಅವರು ಸೋಮವಾರ ಈ ವಿಷಯವನ್ನು ಪ್ರಸ್ತಾಪಿಸಿದರು. ಅರ್ಜಿಯನ್ನು ಗುರುವಾರ ವಿಚಾರಣೆಗೆ ಪಟ್ಟಿ ಮಾಡಲು ಸಿಜೆಐ ಒಪ್ಪಿಕೊಂಡರು.

ಜುಲೈ 30ರಂದು ಅಥಾಂ ನೀಡಿದ ನಿರ್ದೇಶನದಂತೆ ಕರ್ನಾಟಕವು ಕಬಿನಿ ಮತ್ತು ಕೃಷ್ಣರಾಜಸಾಗರ ಜಲಾಶಯಗಳಿಂದ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ಕಾವೇರಿ ನೀರನ್ನು ಬಿಡುಗಡೆ ಮಾಡಬೇಕು ಎಂದು ಸೂಚಿಸಲಾಗಿತ್ತು.

ಈ ಆದೇಶ ಜಾರಿಯಾಗದಿರುವುದನ್ನು ಪ್ರಶ್ನಿಸಿ ತಮಿಳುನಾಡು ಸರ್ಕಾರ ಆಗಸ್ಟ್ 3ರಂದು ಸುಪ್ರೀಂ ಕೋರ್ಟ್ ಮೊರೆ ಹೋಗಿತ್ತು.

15 ದಿನಗಳ ಅವಧಿಯಲ್ಲಿ ಪ್ರತಿದಿನ 3,500 ಕ್ಯೂಸೆಕ್

2ನೇ ಪುಟಕ್ಕೆ...



ಪ್ರಿಯ ಓದುಗರೇ, ಎಲ್ಲರೂ ನಮ್ಮ
**ಅನಂತ ಜನಶಕ್ತಿ**
ದಿನ ಪತ್ರಿಕೆಯನ್ನು ತಪ್ಪದೇ ಓದಿರಿ

# 17 ದಿನಗಳಿಂದ ಸಂಸತ್ತಿನ ಎರಡೂ ಸದನಗಳು ಸ್ತಬ್ಧ;

## ನಮ್ಮ ಬೇಡಿಕೆಗಳಿಗೆ ಹೆದರಿ ಮೋದಿ, ಶಾ ಸದನಕ್ಕೆ ಬರುತ್ತಿಲ್ಲ: ಖರ್ಗೆ

ನವದೆಹಲಿ: ಸಂಸತ್ತಿನ ಎರಡೂ ಸದನಗಳಲ್ಲಿ ನಡೆಯುತ್ತಿರುವ ಗದ್ದಲ ಮತ್ತು ಗದ್ದಲದ ನಡುವೆ, ಕಾಂಗ್ರೆಸ್ ಅಧ್ಯಕ್ಷ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಕೇಂದ್ರ ಸರ್ಕಾರದ ಮೇಲೆ ತೀವ್ರ ವಾಗ್ದಾಳಿ ನಡೆಸಿದರು. ಸಂಸತ್ತು ಸ್ಥಗಿತಗೊಂಡಿದ್ದಕ್ಕೆ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೇ ಕಾರಣ ನೇರವಾಗಿ ದೂಷಿಸಿದರು. ವಿದ್ಯಾರ್ಥಿಗಳಿಗೆ ಸಂಬಂಧಿಸಿದ ಗಂಭೀರ ವಿಷಯಗಳನ್ನು ಚರ್ಚಿಸಲು ಸರ್ಕಾರ ಹಿಂಜರಿಯುತ್ತಿದೆ. ಆದ್ದರಿಂದ, ಅವರು ಸದನಕ್ಕೆ ಬಂದು ಈ ವಿಷಯದ ಬಗ್ಗೆ ಸ್ಪಷ್ಟ ಹೇಳಿಕೆ ನೀಡಬೇಕು ಅಥವಾ ತನ್ನ ಹುದ್ದೆಗೆ ರಾಜೀನಾಮೆ ನೀಡಬೇಕು ಎಂದು ಖರ್ಗೆ ಸ್ಪಷ್ಟವಾಗಿ ಹೇಳಿದ್ದಾರೆ.

ಸಂಸತ್ತು ಸಂಕೀರ್ಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಳೆದ 17 ದಿನಗಳಿಂದ ಇಡೀ ವಿರೋಧ ಪಕ್ಷವು ಗೃಹ ಸಚಿವ ಅಮಿತ್ ಶಾ ಅವರು ಸದನಕ್ಕೆ ಬಂದು ದೇಶದ ವಿದ್ಯಾರ್ಥಿಗಳ ವಿರುದ್ಧ ನಡೆದಿರುವ ಅನ್ಯಾಯ ಮತ್ತು ಪೊಲೀಸ್ ದೌರ್ಜನ್ಯದ ಬಗ್ಗೆ ಅಧಿಕೃತ ಹೇಳಿಕೆ ನೀಡಬೇಕೆಂದು ಒತ್ತಾಯಿಸುತ್ತಿದೆ ಎಂದು ಹೇಳಿದರು. ಸರ್ಕಾರವು ಇತರ ವಿಷಯಗಳ ಬಗ್ಗೆ ತನ್ನ ಅಭಿಪ್ರಾಯಗಳನ್ನು



ವ್ಯಕ್ತಪಡಿಸುವಾಗ, ಯುವಕರು ಮತ್ತು ವಿದ್ಯಾರ್ಥಿಗಳ ಭವಿಷ್ಯದ ಬಗ್ಗೆ ಈ ಸೂಕ್ಷ್ಮ ವಿಷಯವನ್ನು ಚರ್ಚಿಸಲು ಏಕೆ ನಿರಾಕರಿಸುತ್ತದೆ ಎಂದು ಅವರು ಪ್ರಶ್ನಿಸಿದರು. ಪ್ರತಿಪಕ್ಷಗಳು ರಚನಾತ್ಮಕ ಚರ್ಚೆ ಮತ್ತು ಉತ್ತರಗಳನ್ನು ಮಾತ್ರ ಬಯಸುತ್ತವೆ. ಆದರೆ ಸರ್ಕಾರದ ವರ್ತನೆ ಈ ವಿಷಯದಲ್ಲಿ ಸಂಪೂರ್ಣವಾಗಿ ಅಸಡ್ಡೆ ಹೊಂದಿದೆ ಎಂದು ಖರ್ಗೆ ಒತ್ತಿ ಹೇಳಿದರು.

ಪ್ರಧಾನಿಯನ್ನು ಗುರಿಯಾಗಿಸಿಕೊಂಡ ಖರ್ಗೆ, 'ಸದನದಲ್ಲಿ ಉತ್ತರಿಸುವ ಬದಲು, ಅವರು ಇನ್‌ಸ್ಟಾಗ್ರಾಮ್‌ನಲ್ಲಿ ರೀಲ್‌ಗಳನ್ನು ಮಾಡುತ್ತಿದ್ದಾರೆ ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಸಂಸತ್ತನ್ನು ನಿರ್ಲಕ್ಷಿಸಿದ್ದಾರೆ ಎಂದು ಆರೋಪಿಸಿದ ಖರ್ಗೆ, ದೇಶದ ಅತ್ಯುನ್ನತ ನ್ಯಾಯಾಲಯದಲ್ಲಿನ ಪ್ರಮುಖ ವಿಷಯಗಳಿಗೆ ಉತ್ತರಿಸುವ ಬದಲು, ಪ್ರಧಾನಿ ಸಾಮಾಜಿಕ ಮಾಧ್ಯಮ ಮತ್ತು ಇನ್‌ಸ್ಟಾಗ್ರಾಮ್‌ನಲ್ಲಿ ರೀಲ್‌ಗಳನ್ನು ಮಾಡುವಲ್ಲಿ ನಿರತರಾಗಿದ್ದಾರೆ ಎಂದು ಹೇಳಿದರು. ಇದು ದೇಶದ ಸಂಸದರು ಮತ್ತು ಸಾರ್ವಜನಿಕರಿಗೆ ಮಾಡಿದ ನೇರ ಅವಮಾನ ಎಂದು ಅವರು ಬಣ್ಣಿಸಿದರು. ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರು ಸದನವನ್ನು ಪ್ರಜಾಸತ್ತಾತ್ಮಕವಾಗಿ ನಡೆಸಲು ಬಯಸುವುದಿಲ್ಲ. ಸಂಸತ್ತಿನ ಘನತೆಯನ್ನು ಕಡೆಗಣಿಸುತ್ತಿದ್ದಾರೆ ಎಂದು ಕಾಂಗ್ರೆಸ್ ಅಧ್ಯಕ್ಷರು ಆರೋಪಿಸಿದರು.

ಮಲ್ಲಿಕಾರ್ಜುನ ಖರ್ಗೆ ಸರ್ಕಾರದ ಮೇಲೆ ದಾಳಿ ಮಾಡಿ, ಸರ್ಕಾರವನ್ನು ಸಂಸತ್ತಿನ ಮೂಲಕವಲ್ಲ, ಅವರ ಮನೆಗಳಿಂದ ನಡೆಸಲಾಗುತ್ತಿದೆ ಎಂದು ತೋರುತ್ತದೆ ಎಂದು ಹೇಳಿದರು. ವಿರೋಧ ಪಕ್ಷದ ಸಂಸದರು ಸದನದಲ್ಲಿ ತಮ್ಮ

2ನೇ ಪುಟಕ್ಕೆ...

## ರಷ್ಯಾ ಮೇಲೆ ಉಕ್ರೇನ್ ಭೀಕರ ದಾಳಿ:

### 13 ಮಂದಿ ಬಲಿ, 75 ಜನರಿಗೆ ಗಾಯ; ಇದು 4 ವರ್ಷಗಳಲ್ಲೇ ಅತ್ಯಂತ ಡೆಡ್ಲಿ ಅಟ್ಯಾಕ್!

ಮಾಸ್ಕೋ: ರಷ್ಯಾದ ಟಾಟರ್ಸ್ತಾನ್ ಮೇಲೆ ಉಕ್ರೇನ್ ಬೀಕರ ಡ್ರೋನ್ ದಾಳಿ ನಡೆಸಿದ್ದು, ದಾಳಿಯಲ್ಲಿ 13 ಮಂದಿ ಮೃತಪಟ್ಟಿದ್ದಾರೆ ಮತ್ತು 39 ಜನ ಗಾಯಗೊಂಡಿದ್ದಾರೆ. ಇದು ನಾಲ್ಕು ವರ್ಷಗಳ ಹಿಂದೆ ಯುದ್ಧ ಪ್ರಾರಂಭವಾದಾಗಿನಿಂದ ಕೈವ್ ನಡೆಸಿದ ಅತ್ಯಂತ ಮಾರಕ ದಾಳಿಗಳಲ್ಲಿ ಒಂದಾಗಿದೆ.

ಉಕ್ರೇನಿಯನ್ ಗಡಿಯಿಂದ 1,000 ಕಿಲೋಮೀಟರ್(620 ಮೈಲುಗಳು) ದೂರದಲ್ಲಿರುವ ರಷ್ಯಾದ ಪ್ರಮುಖ ಕೈಗಾರಿಕಾ ನಗರವಾದ ನಿಜ್ನೆಕಾಮ್ಸ್ಕ್‌ನಲ್ಲಿರುವ ತೈಲ ಸಂಸ್ಕರಣಾಗಾರದ ಮೇಲೆ ದಾಳಿ ನಡೆಸಲಾಗಿದೆ ಎಂದು ಕೈವ್ ಹೇಳಿದೆ.



ಈ ವರ್ಷ ಎರಡೂ ದೇಶಗಳು ತಮ್ಮ ದೀರ್ಘ-

2ನೇ ಪುಟಕ್ಕೆ...

## ನಮ್ಮಲ್ಲಿ ಯಾವುದೇ ಗೊಂದಲವಿಲ್ಲ:

### ಶೀಘ್ರದಲ್ಲೇ ಖಾತೆ ಹಂಚಿಕೆ; ಡಿಸಿಎಂ ಪರಂ

ಬೆಂಗಳೂರು: ನೂತನ ಸಚಿವರಿಗೆ ಖಾತೆ ಹಂಚಿಕೆ ಕುರಿತು ಯಾವುದೇ ಗೊಂದಲವಿಲ್ಲ, ಈ ಪ್ರಕ್ರಿಯೆ ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ ಎಂದು ಉಪಮುಖ್ಯಮಂತ್ರಿ ಜಿ. ಪರಮೇಶ್ವರ ಹೇಳಿದ್ದಾರೆ. ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಕಾಂಗ್ರೆಸ್ ಹೈಕಮಾಂಡ್ ಜೊತೆ ಚರ್ಚಿಸಲು ನವದೆಹಲಿಗೆ ಹೋಗಿದ್ದು ಅವರು ಮರಳಿ ಬಂದ ನಂತರ ಖಾತೆಗಳನ್ನು ಘೋಷಿಸಬಹುದು ಎಂದಿದ್ದಾರೆ.

ನಮ್ಮಲ್ಲಿ ಯಾವುದೇ ಗೊಂದಲವಿಲ್ಲ,

2ನೇ ಪುಟಕ್ಕೆ...



## ರೇಣುಕಾಸ್ವಾಮಿ ಕೊಲೆ ಪ್ರಕರಣ:

### ನಟ ದರ್ಶನ್, ಪವಿತ್ರಾ ಗೌಡಗೆ ಬಿಗ್ ಶಾಕ್: ಪ್ರದೋಷ್ ಮಾಫಿ ಸಾಕ್ಷಿಗೆ ಕೋರ್ಟ್ ಅಸ್ತು





ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಹಾಗೂ ಅವರ ಗೆಳತಿ ಪವಿತ್ರಾ ಗೌಡ ಅವರಿಗೆ ಮತ್ತಷ್ಟು ಕಾನೂನು ಸಂಕಷ್ಟ ಎದುರಾಗಿದ್ದು, ಪ್ರಕರಣದ 14ನೇ ಆರೋಪಿ(ಎ-14) ಪ್ರದೋಷ್‌ನ್ನನ್ನು 'ಮಾಫಿ ಸಾಕ್ಷಿ'ಯಾಗಿ ಪರಿಗಣಿಸಲು ನ್ಯಾಯಾಲಯ ಸೋಮವಾರ ಒಪ್ಪಿಗೆ ಸೂಚಿಸಿದೆ. ನಟ ದರ್ಶನ್ ಅವರ ವಿರುದ್ಧ ಸ್ನೇಹಿತರೇ ಸಾಕ್ಷ್ಯ ಹೇಳಲು ನಿರ್ಧರಿಸಿದ್ದು, ಪ್ರಕರಣ ಯಾರೂ ನಿರೀಕ್ಷಿಸಿರದ ರೀತಿಯಲ್ಲಿ ದೊಡ್ಡ ತಿರುವು ಪಡೆದುಕೊಂಡಿದೆ.

2ನೇ ಪುಟಕ್ಕೆ...

## ಕ್ಯಾರಿ ಬ್ಯಾಗ್‌ಗೆ ಹೆಚ್ಚುವರಿ ಶುಲ್ಕ ವಿಧಿಸಿದ ಜುಡಿಯೊ ಮಳಿಗೆಗೆ 30,000 ದಂಡ: ಉಚಿತ ಕ್ಯಾರಿ ಬ್ಯಾಗ್ ನೀಡುವುದು ಕಡ್ಡಾಯ

### ಜಿಲ್ಲಾ ಗ್ರಾಹಕರ ಆಯೋಗದ ಆದೇಶ

ದಾವಣಗೆರೆ : ಗ್ರಾಹಕರಿಂದ ಕ್ಯಾರಿ ಬ್ಯಾಗ್‌ಗೆ ಹೆಚ್ಚುವರಿಯಾಗಿ ದಂಡ ಅಥವಾ ಶುಲ್ಕ ವಸೂಲಿ ಮಾಡುವುದು ಅನ್ಯಾಯದ ವ್ಯಾಪಾರ ಹಾಗೂ ಸೇವೆಯಲ್ಲಾದ ನಿರ್ಲಕ್ಷ್ಯ ಎಂದು ದಾವಣಗೆರೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಮಹತ್ವದ ತೀರ್ಪು ನೀಡಿದೆ.

ಪಿ.ಜೆ. ಬಡಾವಣೆಯ ಎವಿಕೆ ರಸ್ತೆಯಲ್ಲಿರುವ ಜುಡಿಯೊ (ತೋಶಾನಿ ಎಂಪೋರಿಯಂ ಅವೆನ್ಯೂ) ಮಳಿಗೆಯಲ್ಲಿ ಬಟ್ಟೆ ಖರೀದಿಸಿದ್ದ ದೂರುದಾರರಾದ ಶ್ರೀ ರಾಜೇಂದ್ರ ಖ/ಠ ಎಸ್. ಕೆ. ಬಸವರಾಜ್ ಅವರಿಂದ ಕ್ಯಾರಿ ಬ್ಯಾಗ್‌ಗಾಗಿ ಹೆಚ್ಚುವರಿಯಾಗಿ ರೂ. 10/- ವಸೂಲಿ

2ನೇ ಪುಟಕ್ಕೆ...

## ಹರಿಹರದಲ್ಲಿ ಹರ್ ಘರ್ ತಿರಂಗಾ ಜಾಗೃತಿ ಜಾಥಾ;

### ದೇಶಭಕ್ತಿ, ಸ್ವಾತಂತ್ರ್ಯದ ಮಹತ್ವ ಸಾರಲು ಶಾಸಕ ಹರೀಶ್ ಕರೆ



ಹರಿಹರ : ಪ್ರತಿಯೊಂದು ಮನೆ ಮನೆಯಲ್ಲೂ ರಾಷ್ಟ್ರಧ್ವಜ ಹಾರಿಸಿ ದೇಶಭಕ್ತಿ ಸ್ವಾತಂತ್ರ್ಯದ ಮಹತ್ವ ಸಾರುವಂತೆ ಶಾಸಕ ಬಿ.ಪಿ ಹರೀಶ್ ಕ್ಷೇತ್ರದ ಜನತೆಗೆ ಕರೆ ನೀಡಿದರು.

ಭಾರತೀಯ ಜನತಾ ಪಕ್ಷದ ವತಿಯಿಂದ ಸೋಮವಾರ ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ದೇಶಭಕ್ತಿ ಹಾಗೂ ರಾಷ್ಟ್ರಧ್ವಜದ ಮಹತ್ವವನ್ನು ಜನರಲ್ಲಿ ಮೂಡಿಸುವ ಉದ್ದೇಶ ಹಮ್ಮಿಕೊಳ್ಳಲಾದ 'ಹರ್ ಘರ್ ತಿರಂಗಾ' ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು,ವಿಶ್ವದಲ್ಲಿಯೇ ಭಾರತ

2ನೇ ಪುಟಕ್ಕೆ...

## ಜಂತುಹುಳು ರಹಿತ ಮಕ್ಕಳೇ ಆರೋಗ್ಯವಂತ ಮಕ್ಕಳು

ದಾವಣಗೆರೆ : "ಜಂತುಹುಳು ರಹಿತ ಮಕ್ಕಳೇ ದೇಶದ ಆರೋಗ್ಯವಂತ ಮಕ್ಕಳು. ಜಂತುಹುಳು ನಿವಾರಣಾ ಮಾತ್ರೆಯನ್ನು ನೀರು ಹಾಗೂ ಆಹಾರ ಸೇವನೆಯ ನಂತರ ಸರಿಯಾಗಿ ಚೀಪಿ ನುಂಗಬೇಕು ಎಂದು ಆರ್.ಸಿ.ಹೆಚ್. ಡಾ.ರೇಣುಕಾರಾಧ್ಯ ಅವರು ತಿಳಿಸಿದರು.

ಅವರು ಸೋಮವಾರ ನಗರದ ಮುದ್ದೇಗೌಡ್ರ ಮಲ್ಲಮ್ಮ ಮುರಿಗೆಪ್ಪ ಬಾಲಿಕಾ ಪ್ರೌಢಶಾಲೆಯಲ್ಲಿ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬರೂ ಊಟಕ್ಕೂ ಮುನ್ನ ಮತ್ತು ಶೌಚಾಲಯ ಬಳಕೆಯ ನಂತರ ಕೈ-ಕಾಲುಗಳನ್ನು ಸಾಬೂನಿನಿಂದ ಸ್ವಚ್ಛವಾಗಿ ತೊಳೆಯಬೇಕು. ವಾರಕ್ಕೊಮ್ಮೆ ಉಗುರುಗಳನ್ನು ಕತ್ತರಿಸುವುದು, ಶುದ್ಧ ಕುಡಿಯುವ ನೀರನ್ನು ಬಳಸುವುದು ಹಾಗೂ ಆಹಾರ

2ನೇ ಪುಟಕ್ಕೆ...



# ಬಿಡದಿ ಟೌನ್‌ಶಿಪ್ ಪಿಸುಮಾತು ವಿವಾದ: ಮಧು ಬಂಗಾರಪ್ಪ ಜೊತೆಗಿನ ಮಾತುಕತೆ ಬಗ್ಗೆ ಬಿ.ವೈ. ವಿಜಯೇಂದ್ರ ಸ್ಪಷ್ಟನೆ

ಬೆಂಗಳೂರು: ಬಿಡದಿ ಸಮೀಪದ ಪ್ರಸ್ತಾವಿತ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್‌ಶಿಪ್ (ಉಃಃಖಿ) ಯೋಜನೆಗೆ ಸಂಬಂಧಿಸಿದಂತೆ ಸಚಿವ ಮಧು ಬಂಗಾರಪ್ಪ ಅವರೊಂದಿಗೆ ನಡೆಸಿದ ಪಿಸುಮಾತು ಕುರಿತು ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸ್ಪಷ್ಟನೆ ನೀಡಿದ್ದಾರೆ.

ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲ್ಲೂಕಿನ ಅತಿವೃಷ್ಟಿ ಹಾಗೂ ಅನಾವೃಷ್ಟಿ ಪರಿಶೀಲನಾ ಸಭೆಗೂ ಮುನ್ನ ಸಚಿವ ಮಧು ಬಂಗಾರಪ್ಪ ಹಾಗೂ ವಿಜಯೇಂದ್ರ ನಡುವೆ ನಡೆದ ಮಾತುಕತೆ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ವೈರಲ್ ಆಗಿತ್ತು.

ಬಿಡದಿ ಟೌನ್ ಶಿಪ್ ಹೋರಾಟದ ವಿಚಾರವಾಗಿ ಉಭಯ ನಾಯಕರು ಪಿಸು ದನಿಯಲ್ಲಿ ಮಾತುಕತೆ ನಡೆಸಿದ್ದರು. ಹೋರಾಟ ಗಂಭೀರ ಸ್ವರೂಪದಲ್ಲಿಲ್ಲ ಎಂಬ ವಿಚಾರವನ್ನು ಮಧು ಬಂಗಾರಪ್ಪ ಅವರಲ್ಲಿ ವಿಜಯೇಂದ್ರ ಹಂಚಿಕೊಂಡಿರುವುದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿತ್ತು.

'ರೈತರ ಭೂಮಿ ಮತ್ತು ಹಿತಾಸಕ್ತಿಗಳ ರಕ್ಷಣೆಯ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ. ಬಿಡದಿ ಹೋರಾಟಕ್ಕೆ ಸಂಬಂಧಿಸಿದಂತೆ ಬಿಜೆಪಿಯ ನಿಲುವಿನಲ್ಲಿ




ಯಾವುದೇ ಗೊಂದಲವಿಲ್ಲ. ಬಿಜೆಪಿ ಮತ್ತು ಜೆಡಿಎಸ್ ಎರಡೂ ಪಕ್ಷಗಳು ರೈತರ ಹಿತಾಸಕ್ತಿ ರಕ್ಷಿಸುವ ಸಾಮಾನ್ಯ ಉದ್ದೇಶಕ್ಕಾಗಿ ಹೋರಾಟ ನಡೆಸುತ್ತಿವೆ' ಎಂದು ವಿಜಯೇಂದ್ರ ತಿಳಿಸಿದ್ದಾರೆ.

ಕಳೆದ ವಾರ ಜೆಡಿಎಸ್ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ್ದು, ಎರಡೂ ಪಕ್ಷಗಳು ಜಂಟಿಯಾಗಿ ಪಾದಯಾತ್ರೆ ನಡೆಸುವ ಸಾಧ್ಯತೆ ಕುರಿತು ಚರ್ಚಿಸಿದ್ದಾಗಿ ವಿಜಯೇಂದ್ರ ಹೇಳಿದ್ದಾರೆ. ಇದಕ್ಕೆ ಕುಮಾರಸ್ವಾಮಿ ಸಕಾರಾತ್ಮಕವಾಗಿ ಸ್ಪಂದಿಸಿದ್ದರು ಎಂದು ಅವರು ತಿಳಿಸಿದ್ದಾರೆ.

ಬಳಿಕ ಜೆಡಿಎಸ್ ಪಾದಯಾತ್ರೆಯ ದಿನಾಂಕಗಳನ್ನು ಘೋಷಿಸಿದ ನಂತರ ಹಿರಿಯ ಬಿಜೆಪಿ ನಾಯಕರೊಂದಿಗೆ ಚರ್ಚೆ ನಡೆಸಲಾಯಿತು. ಪಾದಯಾತ್ರೆಗೆ ಸಾಂಕೇತಿಕ ಬೆಂಬಲ ನೀಡುವುದರ ಜೊತೆಗೆ, ವಿಧಾನಮಂಡಲದ ಒಳಗೂ ರೈತರ ಸಮಸ್ಯೆಗಳನ್ನು ಪ್ರಸ್ತಾಪಿಸುವ ನಿರ್ಧಾರ ಕೈಗೊಳ್ಳಲಾಯಿತು ಎಂದು ವಿಜಯೇಂದ್ರ ವಿವರಿಸಿದ್ದಾರೆ.

ಬಿಡದಿ ರೈತರ ಪಾದಯಾತ್ರೆಯಲ್ಲಿ ತಾವು ಭಾಗವಹಿಸದಿರುವುದರ ಹಿಂದೆ ಯಾವುದೇ ರಾಜಕೀಯ ಕಾರಣವಿಲ್ಲ ಎಂದು ವಿಜಯೇಂದ್ರ ಸ್ಪಷ್ಟಪಡಿಸಿದ್ದಾರೆ. ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಮುಂದೂಡಲ್ಪಟ್ಟಿದ್ದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಹಲವು ಕಾರ್ಯಕ್ರಮಗಳಿಗೆ ಭಾನುವಾರ ಹಾಜರಾಗಬೇಕಿತ್ತು. ಸ್ಥಳೀಯ ಪಕ್ಷದ ನಾಯಕರು ಮನವಿ ಮಾಡಿದ್ದ ಹಿನ್ನೆಲೆಯಲ್ಲಿ ಆ ಕಾರ್ಯಕ್ರಮಗಳಿಗೆ ತೆರಳಿದ್ದಾಗಿ ಅವರು ಹೇಳಿದ್ದಾರೆ.

ವಿಪಕ್ಷ ನಾಯಕ ಆರ್. ಅಶೋಕ್ ಸೇರಿದಂತೆ ಹಲವು ಬಿಜೆಪಿ ನಾಯಕರು ಪಾದಯಾತ್ರೆಗೆ ಸಾಂಕೇತಿಕ ಬೆಂಬಲ ನೀಡಿದ್ದಾರೆ. ಹೀಗಾಗಿ ಈ ವಿಚಾರದಲ್ಲಿ ಪಕ್ಷದೊಳಗೆ ಯಾವುದೇ ಗೊಂದಲವಿಲ್ಲ ಎಂದು ವಿಜಯೇಂದ್ರ ತಿಳಿಸಿದ್ದಾರೆ. "ಬಿಜೆಪಿ ಯಾವಾಗಲೂ ರೈತರ ಪರವಾಗಿ ನಿಲ್ಲಲಿದೆ" ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಬಿಡದಿ ಹೋರಾಟ ನಡೆಸುತ್ತಿರುವ ರೈತರ ಮೇಲೆ ರಾಜ್ಯ ಸರ್ಕಾರ ಒತ್ತಡ ಹೇರುತ್ತಿದೆ ಎಂದು ವಿಜಯೇಂದ್ರ ಆರೋಪಿಸಿದ್ದಾರೆ.

ಪರಿಹಾರ ನೀಡುವ ಆಮಿಷವೊಡ್ಡಿ ಕೆಲ ರೈತರನ್ನು ಹೋರಾಟದಿಂದ ಹಿಂದೆ ಸರಿಸಲು ಪ್ರಯತ್ನಿಸಲಾಗುತ್ತಿದೆ ಎಂಬ ಆರೋಪವನ್ನೂ ಅವರು ಮಾಡಿದ್ದಾರೆ. ಈ ವಿಚಾರವನ್ನು ಈಗಾಗಲೇ ಸಂಬಂಧಪಟ್ಟ ಸಚಿವರ ಗಮನಕ್ಕೂ ತರಲಾಗಿದೆ. ಬಿಡದಿ ಹೋರಾಟಕ್ಕೆ ಬಿಜೆಪಿಯ ಬೆಂಬಲ ಅಚಲವಾಗಿದೆ. ಕರ್ನಾಟಕದಾದ್ಯಂತ ರೈತರ ಭೂಮಿ ರಕ್ಷಣೆಗಾಗಿ ಬಿಜೆಪಿ ಹೋರಾಟ ನಡೆಸಲಿದೆ ಎಂದು ಅವರು ಘೋಷಿಸಿದ್ದಾರೆ.

ಒಂದನೇ ಪುಟದಿಂದ..

## ಹರಿಹರದಲ್ಲಿ ಹರ್ ಘರ್ ತಿರಂಗಾ ಜಾಗೃತಿ ಜಾಥಾ ; ದೇಶಭಕ್ತಿ, ಸ್ವಾತಂತ್ರ್ಯದ ಮಹತ್ವ ಸಾರಲು ಶಾಸಕ ಹರೀಶ್ ಕರೆ

ಕ್ಕೆ ಹೆಮ್ಮೆಯ ಸ್ಥಾನ ದೊರಕಿಸಿಕೊಡುವಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಕೊಡುಗೆ ಮಹತ್ವದ್ದಾಗಿದೆ. ದೇಶದ ಪ್ರತಿಯೊಬ್ಬ ಪ್ರಜೆಯಲ್ಲೂ ರಾಷ್ಟ್ರಪ್ರೇಮ ಹಾಗೂ ಸ್ವಾತಂತ್ರ್ಯದ ಅರಿವು ಮೂಡಿಸುವ ಉದ್ದೇಶದಿಂದ ಬಿಜೆಪಿ ವತಿಯಿಂದ 'ಹರ್ ಘರ್ ತಿರಂಗಾ' ಅಭಿಯಾನ ಹಮ್ಮಿಕೊಳ್ಳಲಾಗಿದೆ.

ದೇಶದ ಇತಿಹಾಸ, ಸ್ವಾತಂತ್ರ್ಯ ಹೋರಾಟ, ನಮ್ಮ ನೆಲ, ಜಲ, ಸಂಸ್ಕೃತಿ ಹಾಗೂ ಪರಂಪರೆಯ ಬಗ್ಗೆ ಪ್ರತಿಯೊಬ್ಬರೂ ಹೆಮ್ಮೆ ಹೊಂದಬೇಕು. ರಾಷ್ಟ್ರಧ್ವಜವು ದೇಶದ ಸಾರ್ವಭೌಮತೆ, ಏಕತೆ ಮತ್ತು ಗೌರವದ ಪ್ರತೀಕವಾಗಿದ್ದು, ಅದರ ಮಹತ್ವವನ್ನು ಯುವಜನತೆ ಸೇರಿದಂತೆ ಎಲ್ಲರಿಗೂ ತಿಳಿಸುವ ಅಗತ್ಯವಿದೆ ಎಂದು ಅವರು ಹೇಳಿದರು.

ಬಿಜೆಪಿ ಜಿಲ್ಲಾ ಮಾಜಿ ಅಧ್ಯಕ್ಷ ಎಸ್.ಎಂ.ವೀರೇಶ್ ಹನಗವಾಡಿ ಮಾತನಾಡಿ, ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ದೇಶದ ಪ್ರತಿಯೊಂದು ಮನೆಗೂ ರಾಷ್ಟ್ರಧ್ವಜ ತಲುಪಬೇಕು ಎಂಬ ಆಶಯದೊಂದಿಗೆ 'ಹರ್ ಘರ್ ತಿರಂಗಾ' ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ರಾಷ್ಟ್ರಧ್ವಜದ ಗೌರವ ಕಾಪಾಡುವುದು ಪ್ರತಿಯೊಬ್ಬ ನಾಗರೀಕನ ಜವಾಬ್ದಾರಿ ಯಾಗಿದ್ದು, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ತ್ಯಾಗವನ್ನು ಸ್ಮರಿಸುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ಶಾಸಕ ಬಿ.ಪಿ. ಹರೀಶ್ ಅವರ ನೇತೃತ್ವದಲ್ಲಿ ನಡೆದ ಜಾಗೃತಿ ಜಾಥಾದಲ್ಲಿ ಬಿಜೆಪಿ ಕಾರ್ಯಕರ್ತರು ನಗರದ ಪ್ರಮುಖ ರಸ್ತೆಗಳಲ್ಲಿ ಹಾಗೂ ಮಹಾತ್ಮ ಗಾಂಧಿ ವೃತ್ತದವರೆಗೆ 150 ಮೀಟರ್ ಉದ್ದದ ರಾಷ್ಟ್ರಧ್ವಜದೊಂದಿಗೆ ಘೋಷಣೆಗಳನ್ನು ಕೂಗುತ್ತಾ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ನಾಯಕರುಗಳ ಚಿತ್ರಪಟಗಳನ್ನು ಪ್ರದರ್ಶಿಸುತ್ತಾ ಸಾಗಿದರು.

ಜಾಥಾದ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಮಹತ್ವ, ರಾಷ್ಟ್ರಧ್ವಜದ ಗೌರವ ಹಾಗೂ ದೇಶದ ಏಕತೆ ಮತ್ತು ಅಖಂಡತೆಯ ಕುರಿತು ಜಾಗೃತಿ ಮೂಡಿಸಲಾಯಿತು.ದೇಶಭಕ್ತಿ ಘೋಷಣೆಗಳನ್ನು ಮೊಳಗಿಸುತ್ತಾ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದರು. ಸಾರ್ವಜನಿಕರು ಹಾಗೂ ಯುವಜನರಲ್ಲಿ ರಾಷ್ಟ್ರಪ್ರೇಮದ ಭಾವನೆ ಮೂಡಿಸುವ ನಿಟ್ಟಿನಲ್ಲಿ ಕಾರ್ಯಕ್ರಮ ಗಮನ ಸೆಳೆಯಿತು.

ಈ ಸಮಯದಲ್ಲಿ ಬಿಜೆಪಿ ನಗರ ಘಟಕದ ಅಧ್ಯಕ್ಷ ರಾಜು ರೋಖಡೆ, ಗ್ರಾಮಾಂತರ ಘಟಕದ ಅಧ್ಯಕ್ಷ ಲಿಂಗರಾಜ್ ಹಿಂಡಸಘಟ್ಟ, ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಹನಗವಾಡಿ ವೀರೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಣ್ಣಪ್ಪ ಐರಾಣಿ, ಅಶ್ವಿನಿ ಕೃಷ್ಣ, ನಗರ ಪ್ರಧಾನ ಕಾರ್ಯದರ್ಶಿ ಸಂತೋಷ್ ಗುಡಿಮನಿ, ಗ್ರಾಮೀಣ ಘಟಕದ ಪ್ರಧಾನ ಕಾರ್ಯದರ್ಶಿ ಕೆ.ಎನ್. ಹಳ್ಳಿ ಮಾಂತೇಶ್, ನಂದಿಗಾವಿ ರಮೇಶ್, ಬಾತಿ ಚಂದ್ರಶೇಖರ್ ಸೇರಿದಂತೆ ಬಿಜೆಪಿ ಮುಖಂಡರು, ಯುವ ಮೋರ್ಚಾ ಹಾಗೂ ಮಹಿಳಾ ಮೋರ್ಚಾ ಪದಾಧಿಕಾರಿಗಳು, ಕಾರ್ಯಕರ್ತರು ಮತ್ತು ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಜಂತುಹುಳು ರಹಿತ ಮಕ್ಕಳೇ ಆರೋಗ್ಯವಂತ ಮಕ್ಕಳು

ಪದಾರ್ಥಗಳನ್ನು ಸದಾ ಮುಚ್ಚಿಡುವುದು ಅತ್ಯಗತ್ಯ ಎಂದು ತಿಳಿಸಿದರು.

ತರಕಾರಿ ಮತ್ತು ಹಣ್ಣುಗಳನ್ನು ಬಳಸುವ ಮುನ್ನ ಶುದ್ಧ ನೀರಿನಿಂದ ತೊಳೆಯಬೇಕು. ಬರಿಗಾಲಿನಲ್ಲಿ ನಡೆಯದೆ ಕಡ್ಡಾಯವಾಗಿ ಚಪ್ಪಲಿ ಧರಿಸಬೇಕು. ಮನೆ ಹಾಗೂ ಶಾಲೆಯ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದರಿಂದ ಮಕ್ಕಳಲ್ಲಿ ಜಂತುಹುಳು ಬಾಧೆಯನ್ನು ಸಂಪೂರ್ಣವಾಗಿ ತಡೆಗಟ್ಟಬಹುದು ಎಂದರು.

ಪ್ರತಿ ವರ್ಷ ಫೆಬ್ರವರಿ 10 ಮತ್ತು ಆಗಸ್ಟ್ 10 ರಂದು 1 ರಿಂದ 19 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಈ ಜಂತುಹುಳು ನಾಶಕ (ಅಲ್ಬೆಂಡಜೋಲ್) ಮಾತ್ರೆಗಳನ್ನು ನೀಡಲಾಗುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಜಂತುಹುಳು ನಿವಾರಣೆ ಹಾಗೂ ನೈರ್ಮಲ್ಯದ ಕುರಿತು ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಸುಶೀಲಮ್ಮ, ಜಿಲ್ಲಾ ಆರೋಗ್ಯ ಅಧಿಕಾರಿಗಳು , ತಾಲೂಕು ಆರೋಗ್ಯಾಧಿಕಾರಿಗಳು , ಬಿ.ಎಚ್.ಇ.ಒ ಹಾಗೂ ಶಾಲೆಯ ಮುಖ್ಯೋಪಾಧ್ಯಾಯರಾದ ವಿರೂಪಾಕ್ಷಪ್ಪ ಅವರು ಉಪಸ್ಥಿತರಿದ್ದರು.


ಅನಂತ ಜನಶಕ್ತಿ
ದಿನಪತ್ರಿಕೆಗೆ ಜಿಲ್ಲಾ ಹಾಗೂ ತಾಲೂಕು ವರದಿಗಾರರು ಬೇಕಾಗಿದ್ದಾರೆ
ಸುದ್ದಿ ಮತ್ತು ಜಾಹೀರಾತು ನೀಡಲು ಕೂಡಲೇ ಸಂಪರ್ಕಿಸಿ

ಪ್ರಿಯ ಓದುಗರೆ, ಎಲ್ಲರೂ ನಮ್ಮ ಅನಂತ ಜನಶಕ್ತಿ ದಿನ ಪತ್ರಿಕೆಯನ್ನು ತಪ್ಪದೇ ಓದಿರಿ


## ನಮ್ಮ ಬೇಡಿಕೆಗಳಿಗೆ ಹೆದರಿ ಮೋದಿ, ಅಮಿತ್ ಶಾ ಸದನಕ್ಕೆ ಬರುತ್ತಿಲ್ಲ: ಖರ್ಗೆ

ಅಭಿಪ್ರಾಯಗಳನ್ನು ಮಂಡಿಸಲು ಪ್ರಯತ್ನಿಸಿದಾಗಲೆಲ್ಲಾ, ಆಡಳಿತ ಪಕ್ಷವು ಉದ್ದೇಶಪೂರ್ವಕವಾಗಿ ಗದ್ದಲವನ್ನು ಸೃಷ್ಟಿಸುತ್ತದೆ ಎಂದು ಅವರು ಹೇಳಿದರು. ರಾಜ್ಯಸಭಾ ಅಧ್ಯಕ್ಷರ ಕಾರ್ಯವೈಖರಿಯ ಬಗ್ಗೆಯೂ ಅವರು ಅಸಮಾಧಾನ ವ್ಯಕ್ತಪಡಿಸಿದರು, ವಿರೋಧ ಪಕ್ಷಕ್ಕೆ ತಮ್ಮ ಅಭಿಪ್ರಾಯಗಳನ್ನು ಮಂಡಿಸಲು ಸಾಕಷ್ಟು ಸಮಯ ನೀಡುತ್ತಿಲ್ಲ ಮತ್ತು ಸದನವನ್ನು ಚರ್ಚೆಯಿಲ್ಲದೆ ಮುಂದೂಡಲಾಗುತ್ತಿದೆ. ಇದರಿಂದಾಗಿ ವಿರೋಧ ಪಕ್ಷದ ಸಂಸದರು ತಮ್ಮ ಧ್ವನಿಯನ್ನು ನಿಗ್ರಹಿಸಲಾಗುತ್ತಿದೆ ಎಂದು ಭಾವಿಸುತ್ತಿದ್ದಾರೆ ಎಂದು ಆರೋಪಿಸಿದರು.

ಕಳೆದ ಹಲವು ದಿನಗಳಿಂದ, ಲೋಕಸಭೆ ಮತ್ತು ರಾಜ್ಯಸಭೆ ಎರಡೂ ಪತ್ರಿಕೆ ಸೋರಿಕೆ ವಿಷಯದ ಕುರಿತು ಜುಲೈ 20 ರಂದು ವಿದ್ಯಾರ್ಥಿಗಳ ಪ್ರತಿಭಟನೆಯ ಸಮಯದಲ್ಲಿ ಪೊಲೀಸ್ ದೌರ್ಜನ್ಯದ ಬಗ್ಗೆ ಭಾರಿ ಗದ್ದಲವನ್ನು ಕಾಣುತ್ತಿವೆ ಎಂಬುದು ಗಮನಾರ್ಹ.

ಈ ಸಂಪೂರ್ಣ ಘಟನೆಯ ಬಗ್ಗೆ ಗೃಹ ಸಚಿವ ಅಮಿತ್ ಶಾ ಸದನದಲ್ಲಿ ವಿವರಣೆಯನ್ನು ನೀಡಬೇಕೆಂದು ವಿರೋಧ ಪಕ್ಷಗಳು ಒತ್ತಾಯಿಸುತ್ತಿವೆ. ಈ ತೀವ್ರ ರಾಜಕೀಯ ಬಿಕ್ಕಟ್ಟಿನಿಂದಾಗಿ, ಸಂಸತ್ತಿನ ಎರಡೂ ಸದನಗಳಲ್ಲಿ ನಿಯಮಿತ ಶಾಸಕಾಂಗ ಕೆಲಸಗಳು ತೀವ್ರವಾಗಿ ಪರಿಣಾಮ ಬೀರುತ್ತವೆ ಮತ್ತು ಗದ್ದಲದ ನೆರಳಿನಲ್ಲಿ ಪ್ರಮುಖ ಸರ್ಕಾರಿ ವ್ಯವಹಾರಗಳನ್ನು ನಡೆಸಲಾಗುತ್ತಿದೆ.

## ಕಾವೇರಿ ವಿವಾದ ತಮಿಳುನಾಡು ಅರ್ಜಿ; ಆಗಸ್ಟ್ 13ಕ್ಕೆ ವಿಚಾರಣೆ

ನೀರಿನಂತೆ ಒಟ್ಟು 4.536 ಟಿಎಂಸಿ ನೀರನ್ನು ಬಿಡುಗಡೆ ಮಾಡಬೇಕು ಎಂದು ತಮಿಳುನಾಡು ಸರ್ಕಾರ ಕೋರಿದೆ. ನಿಗದಿತ ಪ್ರಮಾಣದ ನೀರನ್ನು ಆಗಸ್ಟ್ 12ರೊಳಗೆ ಬಿಡುಗಡೆ ಮಾಡುವಂತೆ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಿದೆ.

ತಮಿಳುನಾಡಿಗೆ ಕಾವೇರಿ ನೀರಿನಲ್ಲಿ ದೊರೆಯಬೇಕಾದ ಪಾಲು ನಿಗದಿತ ಅವಧಿಯಲ್ಲಿ ತಲುಪುವಂತೆ ಕ್ರಮ ಕೈಗೊಳ್ಳಲು ಸುಪ್ರೀಂ ಕೋರ್ಟ್ ಮಧ್ಯಪ್ರವೇಶಿಸಬೇಕು ಎಂದು ಕೋರಿದೆ.

ಇದೇ ವೇಳೆ ತಮಿಳುನಾಡಿನ ಪ್ರತಿಪಕ್ಷ ಡಿಎಂಕೆಯೂ ಕರ್ನಾಟಕದಿಂದ ತಕ್ಷಣ ಕಾವೇರಿ ನೀರು ಬಿಡುಗಡೆ ಮಾಡುವಂತೆ ನಿರ್ದೇಶನ ನೀಡಬೇಕು ಎಂದು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ.

ಡಿಎಂಕೆಯ ರೈತ ಘಟಕದ ಕಾರ್ಯದರ್ಶಿ ಎಕೆಎಸ್ ವಿಜಯನ್ ಪರವಾಗಿ ಸಲ್ಲಿಸಿರುವ ಅರ್ಜಿಯಲ್ಲಿ, 2018ರ ಫೆಬ್ರವರಿ 16ರಂದು ಸುಪ್ರೀಂ ಕೋರ್ಟ್ ನೀಡಿದ ತೀರ್ಪು ಹಾಗೂ ಕಾವೇರಿ ನೀರು ನಿಯಂತ್ರಣ ಸಮಿತಿ (ಅಥಖಿಅ) ಮತ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಅಥಒಂ) ನೀಡಿರುವ ನಂತರದ ನಿರ್ದೇಶನಗಳಂತೆ ಕರ್ನಾಟಕ ನೀರು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಲಾಗಿದೆ.

ಜುಲೈ 28ರಂದು ಅಥಖಿಅ ನೀಡಿದ್ದ ಹಾಗೂ ಜುಲೈ 30ರಂದು ಅಥಒಂ ಅನುಮೋದಿಸಿದ್ದ ನಿರ್ದೇಶನದಂತೆ, ಜುಲೈ 29ರಿಂದ 15 ದಿನಗಳ ಕಾಲ ಬಿಳಿಗುಂಡ್ಲುವಿನಲ್ಲಿ ಪ್ರತಿದಿನ 3,500 ಕ್ಯೂಸೆಕ್ ನೀರಿನ ಹರಿವು ಖಚಿತಪಡಿಸಬೇಕು ಎಂದು ಡಿಎಂಕೆ ಅರ್ಜಿಯಲ್ಲಿ ತಿಳಿಸಿದೆ.

ಕರ್ನಾಟಕದ ಜಲಾಶಯಗಳಿಂದ ಬಿಡುಗಡೆಯಾಗುವ ನೀರು ಮತ್ತು ಬಿಳಿಗುಂಡ್ಲುವಿನಲ್ಲಿ ದಾಖಲಾಗುವ ನೀರಿನ ಹರಿವನ್ನು ಅಥಒಂ ಪ್ರತಿದಿನವೂ ಮೇಲ್ವಿಚಾರಣೆ ನಡೆಸಿ, ಆದೇಶ ಪಾಲನೆಯ ಕುರಿತು ಸುಪ್ರೀಂ ಕೋರ್ಟ್‌ಗೆ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಬೇಕು ಎಂದು ಡಿಎಂಕೆ ಕೋರಿದೆ.

ಕಾವೇರಿ ನೀರು ನಿರ್ವಹಣಾ ಯೋಜನೆ–2018ರಡಿ ರಚಿಸಲಾದ ಶಾಸನಬದ್ಧ ಸಂಸ್ಥೆಗಳು ನೀಡಿರುವ ನಿರ್ದೇಶನಗಳನ್ನು ಕರ್ನಾಟಕ ಪಾಲಿಸಿಲ್ಲ ಎಂದು ಡಿಎಂಕೆ ಆರೋಪಿಸಿದೆ.

ಕರ್ನಾಟಕ ಮತ್ತು ತಮಿಳುನಾಡು ನಡುವೆ ಕಾವೇರಿ ನದಿ ನೀರು ಹಂಚಿಕೆ ಕುರಿತು ಹಲವು ವರ್ಷಗಳಿಂದ ಮುಂದುವರಿದಿರುವ ವಿವಾದದ ನಡುವೆಯೇ ಈ ಅರ್ಜಿಗಳು ಸುಪ್ರೀಂ ಕೋರ್ಟ್ ಮುಂದೆ ಬಂದಿವೆ.

## ರಷ್ಯಾ ಮೇಲೆ ಉಕ್ರೇನ್ ಭೀಕರ ದಾಳಿ: 13 ಮಂದಿ ಬಲಿ, 75 ಜನರಿಗೆ ಗಾಯ;

### ಇದು 4 ವರ್ಷಗಳಲ್ಲೇ ಅತ್ಯಂತ ಡೆಡ್ಲಿ ಅಟ್ಯಾಕ್!

ಶ್ರೇಣಿಯ ದಾಳಿಗಳನ್ನು ಗಮನಾರ್ಹವಾಗಿ ಹೆಚ್ಚಿಸಿವೆ. ಇದು ನಾಗರಿಕರ ಸಾವುಗಳ ಹೆಚ್ಚಳಕ್ಕೆ ಕಾರಣವಾಗಿದೆ ಎಂದು ವಿಶ್ವಸಂಸ್ಥೆ ತಿಳಿಸಿದೆ. ನಿಜ್ನಿಕಾಮ್ಸ್ಕ್ ಮೇಲಿನ ದಾಳಿಯಲ್ಲಿ "13 ಜನರು ಸಾವನ್ನಪ್ಪಿದ್ದಾರೆ" ಎಂದು ಪ್ರಾದೇಶಿಕ ಪತ್ರಿಕಾ ಸೇವೆ ಸೋಮವಾರ ಪ್ರಕಟಣೆಯಲ್ಲಿ ತಿಳಿಸಿದೆ. ಇನ್ನೂ ದಾಳಿಯಲ್ಲಿ 75 ಜನ ಗಾಯಗೊಂಡಿದ್ದು, ಅವರಲ್ಲಿ 21 ಜನರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಉಕ್ರೇನ್ ಇತ್ತೀಚಿಗೆ ರಷ್ಯಾದ ತೈಲ ಸಂಸ್ಕರಣಾಗಾರಗಳ ಮೇಲೆ ದಾಳಿಯನ್ನು ತೀವ್ರಗೊಳಿಸಿದ್ದು, ಟಾಟರ್ಸ್ತಾನ್ ಪ್ರದೇಶವು ಇಂಧನ ಸಂಪನ್ಮೂಲಗಳಿಂದ ಸಮೃದ್ಧವಾಗಿದೆ.

## ಕ್ಯಾರಿ ಬ್ಯಾಗ್‌ಗೆ ಹೆಚ್ಚುವರಿ ಶುಲ್ಕ ವಿಧಿಸಿದ ಜುಡಿಯೊ ಮಳಿಗೆಗೆ 30,000 ದಂಡ:

ಮಾಡಿದ್ದಕ್ಕಾಗಿ ಆಯೋಗವು ಈ ಆದೇಶ ಹೊರಡಿಸಿದೆ.

ಪ್ರಕರಣದ ವಿವರ: ದೂರುದಾರರು ಜುಡಿಯೊ ಮಳಿಗೆಯಲ್ಲಿ ಬಟ್ಟೆಗಳನ್ನು ಖರೀದಿಸಿದಾಗ, ಅವುಗಳನ್ನು ಒಯ್ಯಲು ಕ್ಯಾರಿ ಬ್ಯಾಗ್ ನೀಡಲು ಮಳಿಗೆಯವರು ಹೆಚ್ಚುವರಿಯಾಗಿ ರೂ. 10/– ಶುಲ್ಕ ಪಡೆದಿದ್ದರು. ಇದರಿಂದ ನೊಂದ ಗ್ರಾಹಕರು ಅನ್ಯಾಯದ ವ್ಯಾಪಾರ ಪದ್ಧತಿ ಹಾಗೂ ಸೇವೆಯಲ್ಲಿನ ಕೊರತೆಯನ್ನು ಪ್ರಶ್ನಿಸಿ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು. ದೂರನ್ನು ಕೂಲಂಕುಷವಾಗಿ ಪರಿಶೀಲಿಸಿದ ಆಯೋಗವು, ಗ್ರಾಹಕರಿಂದ ಕ್ಯಾರಿ ಬ್ಯಾಗ್ ಶುಲ್ಕ ವಸೂಲಿ ಮಾಡುವುದು ಕಾನೂನುಬಾಹಿರ ಹಾಗೂ ಸೇವಾ ಲೋಪ ಎಂದು ಸ್ಪಷ್ಟಪಡಿಸಿದೆ.

ಸೇವೆಯಲ್ಲಾದ ನಿರ್ಲಕ್ಷ್ಯ, ಅನ್ಯಾಯದ ವ್ಯಾಪಾರ ಮತ್ತು ದೂರಿನ ಖರ್ಚು ಸೇರಿ ದೂರುದಾರರಿಗೆ ಒಟ್ಟು ರೂ. 10,000/– ಗಳ ಪರಿಹಾರ ಹಾಗೂ ಪಾವತಿಸಿದ್ದ ರೂ. 10/– ಅನ್ನು ಹಿಂತಿರುಗಿಸುವಂತೆ ಜುಡಿಯೊ ಸಂಸ್ಥೆಗೆ ಆದೇಶಿಸಲಾಗಿದೆ. ಇದರೊಂದಿಗೆ, ಗ್ರಾಹಕ ಕಾನೂನು ನೆರವು ಖಾತೆಗೆ ರೂ. 20,000/– ಜಮಾ ಮಾಡಲು ಸೂಚಿಸಲಾಗಿದ್ದು, ಒಟ್ಟು ರೂ. 30,000/– ಗಳ ಮೊತ್ತವನ್ನು ಆದೇಶದ ದಿನಾಂಕದಿಂದ ಒಂದು ತಿಂಗಳೊಳಗೆ ಪಾವತಿಸಲು ಆದೇಶಿಸಲಾಗಿದೆ.

ಉತ್ಪನ್ನಗಳನ್ನು ಖರೀದಿಸುವ ಎಲ್ಲಾ ಗ್ರಾಹಕರಿಗೆ ಉಚಿತವಾಗಿ ಕ್ಯಾರಿ ಬ್ಯಾಗ್‌ಗಳನ್ನು ಒದಗಿಸುವುದು ಕಡ್ಡಾಯವಾಗಿದೆ. ಈ ಆದೇಶವು ಕೇವಲ ಸದರಿ ಮಳಿಗೆಗೆ ಮಾತ್ರವಲ್ಲದೆ ಎಲ್ಲಾ ಸಗಟು ವ್ಯಾಪಾರಿಗಳು, ರಿಟೇಲ್ ಮಾರಾಟಗಾರರು, ದೊಡ್ಡ ಮಾಲ್‌ಗಳು, ಮೋರ್, ರಿಲಯನ್ಸ್, ಟ್ರೆಂಡ್ಸ್ ಹಾಗೂ ಇನ್ನಿತರ ಎಲ್ಲಾ ಮಾರಾಟ ಮಳಿಗೆಗಳಿಗೂ ಅನ್ವಯಿಸುತ್ತದೆ ಎಂದು ಆಯೋಗ ತಿಳಿಸಿದೆ.

ಈ ಮಹತ್ವದ ಆದೇಶವನ್ನು ದಾವಣಗೆರೆ ಜಿಲ್ಲಾ ಗ್ರಾಹಕರ ಆಯೋಗದ ಅಧ್ಯಕ್ಷರಾದ ಕುಮಾರಿ ಹೆಚ್. ಎನ್. ಮೀನಾ ಹಾಗೂ ಸದಸ್ಯರಾದ ಶ್ರೀ ಸಿ.ಎಸ್. ತ್ಯಾಗರಾಜನ್ ಅವರನ್ನೊಳಗೊಂಡ ಪೀಠವು ಹೊರಡಿಸಿದೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.

## ನಮ್ಮಲ್ಲಿ ಯಾವುದೇ ಗೊಂದಲವಿಲ್ಲ: ಡಿಸಿಎಂ ಪರಂ

ಹೈಕಮಾಂಡ್ ಜೊತೆ ಚರ್ಚಿಸಿದ ನಂತರ ಪ್ರಕ್ರಿಯೆ ಪೂರ್ಣಗೊಳಿಸಬೇಕು. ಸಿಎಂ ದೆಹಲಿಗೆ ಹೋಗಿದ್ದಾರೆ. ಅವರು ಇಂದು ವಾಪಸ್ ಬಂದ ನಂತರ ಖಾತೆಗಳ ಹಂಚಿಕೆ ಘೋಷಣೆ ಮಾಡುವ ಭರವಸೆಯಿದೆ ಎಂದಿದ್ದಾರೆ. ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಪ್ರಶ್ನೆಗಳನ್ನು ಸಿದ್ಧಪಡಿಸುವುದು ಮತ್ತು ಉತ್ತರಿಸುವುದು ಅವರಿಗೆ ಕಷ್ಟವಾಗುವುದಿಲ್ಲವೇ ಎಂಬ ಪ್ರಶ್ನೆಗೆ ಉತ್ತರಿಸಿದ ಪರಮೇಶ್ವರ್, ಅವರೆಲ್ಲರೂ ಸಮರ್ಥರಾಗಿರುವುದರಿಂದ ಮತ್ತು ಅವರಿಗೆ ಸಹಾಯ ಮಾಡಲು ಹಿರಿಯರು ಇರುವುದರಿಂದ ಯಾವುದೇ ಸಮಸ್ಯೆಯಾಗುವುದಿಲ್ಲ ಎಂದು ಹೇಳಿದರು.

ಹೊಸದಾಗಿ ಸಚಿವರಾದವರು ಆರಂಭದಲ್ಲಿ ಕೆಲವು ತೊಂದರೆಗಳನ್ನು ಎದುರಿಸಬಹುದು. ಆದರೆ ಅವರಿಗೆ ತಿಳಿಸಲು ಅಧಿಕಾರಿಗಳು ಇರುತ್ತಾರೆ. ಕಾಲಾನಂತರದಲ್ಲಿ, ಅವರು ವಿಷಯಗಳನ್ನು ಕಲಿಯುತ್ತಾರೆ. ನಾವು ಹೊಸ ಸಚಿವರಾಗಿದ್ದಾಗ ನಾವು ಸಹ ಅದನ್ನು ಎದುರಿಸಿದ್ದೇವೆ. ಆಡಳಿತವನ್ನು ಕಲಿತ ನಂತರ, ವಿಷಯಗಳು ಸರಿಯಾಗುತ್ತವೆ. ಅವರು ಶಾಸಕರಾಗಿರುವುದರಿಂದ, ಅವರಿಗೆ ವಿಷಯಗಳು ಹೊಸತಾಗಿರುವುದಿಲ್ಲ ಎಂದು ಅವರು ಹೇಳಿದರು. ನಿನ್ನೆ ಸಂಜೆಯಿಂದ ದೆಹಲಿಯಲ್ಲಿರುವ ಶಿವಕುಮಾರ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ ಸಿ ವೇಣುಗೋಪಾಲ್ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದರು. ಪಕ್ಷದ ಮೂಲಗಳ ಪ್ರಕಾರ, ಆಗಸ್ಟ್ 3 ರಂದು ಸಂಪುಟಕ್ಕೆ ಸೇರ್ಪಡೆಗೊಂಡ 19 ಹೊಸ ಸಚಿವರಿಗೆ ಖಾತೆ ಹಂಚಿಕೆಗೆ ಸಂಬಂಧಿಸಿದಂತೆ ಅವರು ಕಾಂಗ್ರೆಸ್ ಹೈಕಮಾಂಡ್ ಜೊತೆ ಚರ್ಚಿಸಿದ್ದಾರೆ ಎನ್ನಲಾಗಿದೆ. ಆಗಸ್ಟ್ 13 ರಿಂದ ರಾಜ್ಯ ವಿಧಾನಸಭೆಯ ಮುಂಗಾರು ಅಧಿವೇಶನಕ್ಕೆ ಮುಂಚಿತವಾಗಿ ಈ ಎಲ್ಲಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಸಿಎಂ ಬಯಸುತ್ತಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

## ಪ್ರದೋಷ್ ಮಾಫಿ ಸಾಕ್ಷಿಗೆ ಕೋರ್ಟ್ ಅಸ್ತು

ಹೀಗಾಗಿ ಜೈಲಿನಲ್ಲಿರುವ ನಟ ದರ್ಶನ್, ಹಾಗೂ ಪವಿತ್ರಾ ಗೌಡ ಅವರಿಗೆ ಭಾರೀ ಟೆನ್ಷನ್ ಶುರುವಾಗಿದೆ. ಪ್ರದೋಷ್ ನ್ಯಾಯಾಲಯಕ್ಕೆ ಸಲ್ಲಿಸಿರುವ 11 ಪುಟಗಳ ಕ್ಷಮಾದಾನ ಅರ್ಜಿ(ಮಾಫಿ ಸಾಕ್ಷಿ)ಯಲ್ಲಿ ತಾನು ಮಾಡಿದ ತಪ್ಪಿಗೆ ಪಶ್ಚಾತ್ತಾಪ ವ್ಯಕ್ತಪಡಿಸಿದ್ದಾರೆ. ಜಯನಗರದ ಮೈದಾನದಲ್ಲಿ ದರ್ಶನ್ ಪರಿಚಯವಾದ ದಿನದಿಂದ ಹಿಡಿದು ಜೈಲು ಪಾಲಾಗುವವರೆಗಿನ ಇಡೀ ಘಟನಾವಳಿಯನ್ನು ಎಳೆಎಳೆಯಾಗಿ ಸಿಸಿಎಚ್–59 ನ್ಯಾಯಾಧೀಶರ ಮುಂದೆ ಪ್ರದೋಷ್ ಬಿಚ್ಚಿಟ್ಟಿದ್ದಾನೆ.

ಮಹತ್ವದ ಬೆಳವಣಿಗೆಯೊಂದರಲ್ಲಿ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರದೋಷ್‌ನನ್ನು ಮಾಫಿ ಸಾಕ್ಷಿಯಾಗಿ ಪರಿಗಣಿಸಲು 59ನೇ ಸಿಸಿಹೆಚ್ ನ್ಯಾಯಾಲಯ ಸಮ್ಮತಿ ನೀಡಿದೆ. ಈ ಹಿಂದೆ ಪ್ರದೋಷ್ ಮಾಫಿ ಸಾಕ್ಷಿಯಾಗಲು ಪ್ರಾಸಿಕ್ಯೂಷನ್ ಒಪ್ಪಿಗೆ ನೀಡಿತ್ತು. ಆದರೆ ದರ್ಶನ್ ಪರ ವಕೀಲರು ಇದನ್ನು ವಿರೋಧಿಸಿದ್ದರು. ಇದೀಗ ನ್ಯಾಯಾಲಯವೇ ಪ್ರದೋಷ್ ಮಾಫಿ ಸಾಕ್ಷಿ ಅರ್ಜಿ ಪುರಸ್ಕರಿಸಿದೆ.

# ಬೆಳೆ ಹಾನಿಯ ನಿಖರ ಅಂದಾಜು ಸಲ್ಲಿಸಿ: ಅಧಿಕಾರಿಗಳಿಗೆ ಎಂ.ಬಿ. ಪಾಟೀಲ ಸೂಚನೆ

## ವಿಜಯಪುರ ಜಿಲ್ಲೆಯಲ್ಲಿ ಶೇ.87.7ರಷ್ಟು ಬಿತ್ತನೆ; ಮಳೆ ಕೊರತೆಯಿಂದ ತೊಗರಿ, ಹತ್ತಿ, ಕಬ್ಬು, ಸೂರ್ಯಕಾಂತಿಗೆ ತೇವಾಂಶದ ಹೊಡೆತ

ವಿಜಯಪುರ : ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಬಿತ್ತನೆಯಾದ ಬೆಳೆಗಳಿಗೆ ತೇವಾಂಶದ ಕೊರತೆ ಎದುರಾಗಿರುವ ಹಿನ್ನೆಲೆಯಲ್ಲಿ, ರೈತರ ಜಮೀನುಗಳಿಗೆ ತೆರಳಿ ಬೆಳೆ ಹಾನಿಯ ನಿಜವಾದ ಸ್ಥಿತಿಯನ್ನು ಪರಿಶೀಲಿಸಿ, ಫೋಟೋಗಳೊಂದಿಗೆ ವೈಜ್ಞಾನಿಕ ಹಾಗೂ ನಿಖರ ವರದಿಯನ್ನು ಯಾವುದೇ ತಪ್ಪಿಲ್ಲದೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆ ಆಧಾರಿತ ಕೃಷಿ ಎಷ್ಟು ಕಷ್ಟಕರವಾಗಿದೆ ಎಂಬುದು ಬರ ಪರಿಸ್ಥಿತಿ ಅವಲೋಕನದ ವೇಳೆ ಸ್ಪಷ್ಟವಾಗಿ ಕಂಡುಬಂದಿದೆ. ಜಿಲ್ಲೆಯ ಬಹುತೇಕ ರೈತರು ಸಂಕಷ್ಟದಲ್ಲಿದ್ದು, ಅವರ ನೆರವಿಗೆ ಧಾವಿಸುವುದು ಸರ್ಕಾರದ ಕರ್ತವ್ಯ. ರೈತರ ನೆರವಿಗೆ ಸರ್ಕಾರ ಬದ್ಧವಾಗಿದೆ ಎಂದರು.

ಜಿಲ್ಲೆಯ ವಿವಿಧ ಭಾಗಗಳಲ್ಲಿ ತೊಗರಿ, ಹತ್ತಿ, ಸೂರ್ಯಕಾಂತಿ, ಕಬ್ಬು ಸೇರಿದಂತೆ ಪ್ರಮುಖ ಬೆಳೆಗಳ ಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸಲಾಗಿದೆ. ಕ್ಷೇತ್ರದ ಶಾಸಕರು, ಕೃಷಿ ಇಲಾಖೆ ಅಧಿಕಾರಿಗಳು ಹಾಗೂ ರೈತರೊಂದಿಗೆ ಬೆಳೆ ಪರಿಸ್ಥಿತಿ ಕುರಿತು ಮಾಹಿತಿ ಪಡೆದಿದ್ದೇನೆ. ನಿಜವಾದ ಪರಿಸ್ಥಿತಿಯನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು, ರೈತರಿಗೆ ಅಗತ್ಯ ನೆರವು ದೊರಕಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ 7.75 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ನಿಗದಿಪಡಿಸಲಾಗಿತ್ತು. ಆದರೆ ಈವರೆಗೆ 6.79 ಲಕ್ಷ ಹೆಕ್ಟೇರ್‌ನಲ್ಲಿ ಮಾತ್ರ ಬಿತ್ತನೆಯಾಗಿದ್ದು, ಗುರಿಯ ಶೇ.87.7ರಷ್ಟು ಪ್ರದೇಶದಲ್ಲಿ ಬೆಳೆ ಬಿತ್ತನೆಯಾಗಿದೆ ಎಂದು ಸಚಿವರು ತಿಳಿಸಿದರು.

ಜೂನ್‌ನಲ್ಲಿ ವಾಡಿಕೆಯ 90.4 ಮಿ.ಮೀ. ಮಳೆಯಾಗಬೇಕಾಗಿದ್ದರೆ, 72.6 ಮಿ.ಮೀ. ಮಾತ್ರ ಮಳೆಯಾಗಿದೆ. ಜುಲೈನಲ್ಲಿ ವಾಡಿಕೆಯ 72.5 ಮಿ.ಮೀ. ಮಳೆಯಾಗಿದ್ದು, ಆಗಸ್ಟ್ 7ರವರೆಗೆ 19.4 ಮಿ.ಮೀ. ಮಳೆಯಾಗಬೇಕಿದ್ದಲ್ಲಿ ಕೇವಲ 12.5 ಮಿ.ಮೀ. ಮಳೆಯಾಗಿದೆ.

ಜೂನ್ 1ರಿಂದ ಆಗಸ್ಟ್ 8ರವರೆಗೆ ಜಿಲ್ಲೆಯಲ್ಲಿ ವಾಡಿಕೆಯಂತೆ 182.3 ಮಿ.ಮೀ. ಮಳೆಯಾಗಬೇಕಿದ್ದರೂ 157.6 ಮಿ.ಮೀ. ಮಾತ್ರ ಮಳೆಯಾಗಿದೆ. ಪರಿಣಾಮ ಮಳೆ ಕೊರತೆ ಉಂಟಾಗಿದೆ ಎಂದು ವಿವರಿಸಿದರು.

ವಿಜಯಪುರ ತಾಲೂಕಿನ ಹಿಟ್ನಳ್ಳಿ, ಮದಭಾವಿ ಹಾಗೂ ಶಿವಣಗಿ, ದೇವರಹಿಪ್ಪರಗಿ ತಾಲೂಕಿನ ಬೊಮ್ಮನಹಳ್ಳಿ ಹಾಗೂ ಸಿಂದಗಿ ತಾಲೂಕಿನ ಕನ್ನೊಳ್ಳಿ ಸೇರಿದಂತೆ ಹಲವು ಗ್ರಾಮಗಳಲ್ಲಿ



ಬೆಳೆಗಳಿಗೆ ತೇವಾಂಶದ ಕೊರತೆ ಕಂಡುಬಂದಿದೆ.

ತೇವಾಂಶ ಕೊರತೆಯಿಂದ ಸಸಿಗಳ ಸಂ–ಖ್ಯೆ ಕಡಿಮೆಯಾಗುವುದರ ಜೊತೆಗೆ ಬೆಳವಣಿಗೆಯೂ ಕುಂಠಿತವಾಗಿದೆ. ತೊಗರಿ ಹಾಗೂ ಹತ್ತಿಯಲ್ಲಿ ಕವಲುಗಳು ಕಡಿಮೆಯಾಗಿದ್ದು, ಹೂ ಮತ್ತು ಕಾಯಿಗಳ ಸಂಖ್ಯೆಯಲ್ಲೂ ಇಳಿಕೆಯಾಗಿದೆ. ಕಬ್ಬಿನಲ್ಲಿ ಗಣಿಕೆಗಳ ಉದ್ದ ಹಾಗೂ ಸಂಖ್ಯೆಯಲ್ಲಿ ಇಳಿಕೆ ಕಂಡುಬಂದಿದೆ. ಸೂರ್ಯಕಾಂತಿಯಲ್ಲಿ ಹೂವಿನ ಗಾತ್ರ ಕಡಿಮೆಯಾಗಿದ್ದು, ಕಾಳು ಜೊಳ್ಳಾಗುವ ಸಾಧ್ಯತೆ ಇರುವುದರಿಂದ ಇಳುವರಿ ಕುಸಿಯುವ ಆತಂಕವಿದೆ ಎಂದು ಸಚಿವರು ವಿವರಿಸಿದರು.

ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಗಳಲ್ಲಿ ಸಾಕಷ್ಟು ನೀರು ಸಂಗ್ರಹವಿದ್ದು, ಜಿಲ್ಲೆಯಲ್ಲಿ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಇಲ್ಲ ಎಂದು ಎಂ.ಬಿ. ಪಾಟೀಲ ಹೇಳಿದರು.

ಜಿಲ್ಲೆಯ ಜಲಾಶಯಗಳಲ್ಲಿ ಶೇ.94ಕ್ಕಿಂತ ಹೆಚ್ಚಿನ ನೀರು ಸಂಗ್ರಹವಿರುವ ಹಿನ್ನೆಲೆಯಲ್ಲಿ ಭೀಮಾ ನದಿಗೆ ನೀರು ಹರಿಸಲಾಗುತ್ತಿದೆ. ಹೀಗಾಗಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವುದಿಲ್ಲ ಎಂದರು. ಕುಡಿಯುವ ನೀರಿನ ಕಾಮಗಾರಿಗಳಿಗಾಗಿ ಟಾಸ್ಕ್‌ಫೋರ್ಸ್ ಸಮಿತಿಗೆ ಈಗಾಗಲೇ 4 ಕೋಟಿ, ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 1 ಕೋಟಿಯಂತೆ ಜಿಲ್ಲೆಗೆ ಒಟ್ಟು 12 ಕೋಟಿ ಅನುದಾನ ಬಿಡುಗಡೆಯಾಗಿದೆ ಎಂದು ತಿಳಿಸಿದರು.

ಜಾನುವಾರುಗಳಿಗೆ ಮೇವು ಕೊರತೆಯಾಗದಂತೆ ಅಗತ್ಯ ಪ್ರಮಾಣದಲ್ಲಿ ಮೇವು ದಾಸ್ತಾನು ಮಾಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಜಿಲ್ಲೆಯಲ್ಲಿ ಸುಮಾರು 2,68,616 ದೊಡ್ಡ ಜಾನುವಾರುಗಳು ಹಾಗೂ 8,05,963 ಸಣ್ಣ ಜಾನುವಾರುಗಳಿವೆ. ರೈತರ ಬಳಿ ಅಂದಾಜು 3,83,089 ಮೆಟ್ರಿಕ್ ಟನ್ ಒಣ ಮೇವು ದಾಸ್ತಾನಿದ್ದು, ಇದು ಮುಂದಿನ 28 ವಾರಗಳಿಗೆ ಸಾಕಾಗಲಿದೆ ಎಂದು ಸಚಿವರು ಹೇಳಿದರು.

ಈ ವಾರದಲ್ಲಿ ಇನ್ನೂ ಮೂರು–ನಾಲ್ಕು ತಾಲೂಕುಗಳಲ್ಲಿ ಬರ ಪರಿಸ್ಥಿತಿ ಅವಲೋಕನ ನಡೆಸಲಾಗುವುದು ಎಂದರು.

2025–26ನೇ ಸಾಲಿನಲ್ಲಿ ಪ್ರವಾಹ ಹಾಗೂ ಅತಿವೃಷ್ಟಿಯಿಂದ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ಹಾನಿಯಾದ ಹಿನ್ನೆಲೆಯಲ್ಲಿ 3,00,384 ರೈತರಿಗೆ ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ 328.72 ಕೋಟಿ, ರಾಜ್ಯ ಸರ್ಕಾರದ ಹೆಚ್ಚುವರಿ ಪರಿಹಾರವಾಗಿ 243.02 ಕೋಟಿ, ಒಟ್ಟು 571.44 ಕೋಟಿ ಪರಿಹಾರವನ್ನು ಡಿಬಿಟಿ ಮೂಲಕ ರೈತರ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

ಇಷ್ಟೊಂದು ದೊಡ್ಡ ಮೊತ್ತದ ಪರಿಹಾರ ನೀಡಿದ ರಾಜ್ಯದ ಮೊದಲ ಜಿಲ್ಲೆ ಎಂಬ ಹೆಗ್ಗಳಿಕೆಗೆ ವಿಜಯಪುರ ಪಾತ್ರವಾಗಿದೆ ಎಂದರು.

2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ 83,349 ರೈತರು ತೊಗರಿ ಹಾಗೂ 6,578 ರೈತರು ಹತ್ತಿ ಬೆಳೆಗೆ ವಿಮೆ ಮಾಡಿಸಿದ್ದರು. ಇವರಿಗೆ ಮಧ್ಯಂತರ ಪರಿಹಾರವಾಗಿ 103.23 ಕೋಟಿ ಜಮೆಯಾಗಿದೆ.

ಬೆಳೆ ಅಂದಾಜು ಸಮೀಕ್ಷೆ ಆಧಾರದ ಮೇಲೆ 66,276 ರೈತರಿಗೆ 132.40 ಕೋಟಿ ಬೆಳೆ ವಿಮೆ ಜಮೆಯಾಗಿದ್ದು, ಒಟ್ಟಾರೆ ವಿಜಯಪುರ ಜಿಲ್ಲೆಗೆ 235.63 ಕೋಟಿ ಬೆಳೆ ವಿಮೆ ಪಾವತಿಯಾಗಿದೆ ಎಂದು ವಿವರಿಸಿದರು.

2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 99,154 ರೈತರು ಹಾಗೂ 2026–27ನೇ ಸಾಲಿನಲ್ಲಿ 2,54,766 ರೈತರು ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಗೆ ನೋಂದಾಯಿಸಿಕೊಂಡಿದ್ದಾರೆ ಎಂದರು.

ಬೆಳೆ ವಿಮೆ ನೋಂದಣಿಗೆ ವ್ಯಾಪಕ ಜಾಗೃತಿ

ಪ್ರಸ್ತುತ ಸಾಲಿನಲ್ಲಿ ಸಾಲ ಪಡೆದಿರುವ ಬ್ಯಾಂಕ್‌ನಲ್ಲಿಯೇ ಬೆಳೆ ವಿಮೆ ನೋಂದಾಯಿಸಬೇಕಾದ ಹಿನ್ನೆಲೆಯಲ್ಲಿ ರೈತರಿಗೆ ತೊಂದರೆಯಾಗದಂತೆ ವ್ಯಾಪಕ ಜಾಗೃತಿ ಮೂಡಿಸಲಾಗಿದೆ. ಗ್ರಾಮಗಳಲ್ಲಿ ಡಂಗೂರ ಸಾರುವುದು, ಪ್ರಚಾರ ವಾಹನಗಳ ಮೂಲಕ ಮಾಹಿತಿ ನೀಡುವುದು, ಪೋಸ್ಟರ್ ಹಾಗೂ ಕರಪತ್ರ ವಿತರಿಸುವ ಮೂಲಕ ಜಾಗೃತಿ ಅಭಿಯಾನ ನಡೆಸಲಾಗಿದೆ.

ಬ್ಯಾಂಕ್ ಅಧಿಕಾರಿಗಳೊಂದಿಗೆ ನಿರಂತರ ಸಭೆ ನಡೆಸಿ, ಪಿಕೆಪಿಎಸ್ ಸಂಘಗಳಿಗೆ ತರಬೇತಿ ನೀಡಿ, ಲಾಗಿನ್ ವ್ಯವಸ್ಥೆ ಕಲ್ಪಿಸುವ ಮೂಲಕ ರೈತರಿಗೆ ಬೆಳೆ ವಿಮೆ ನೋಂದಣಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದು ಸಚಿವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಜಿಲ್ಲಾಧಿಕಾರಿ ಡಾ. ಆನಂದ ಕೆ., ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ, ತೋಟಗಾರಿಕಾ ಇಲಾಖೆ ಜಂಟಿ ನಿರ್ದೇಶಕ ಸಿದ್ರಾಮ ಬರಗಿಮಠ ಹಾಗೂ ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಉಪಸ್ಥಿತರಿದ್ದರು.

# ಧರ್ಮದ ಪಾತ್ರ ಭಾರತ ಇತಿಹಾಸದಲ್ಲಿ ಮಹತ್ವದ್ದು: ಡಾ. ಶ್ರೀನಿವಾಸ ದೊಡಮನಿ



ಭಾರತದ ಇತಿಹಾಸದಲ್ಲಿ ಧರ್ಮಗಳು ಮಹತ್ವದ ಪಾತ್ರ ವಹಿಸಿದ್ದು, ಇತಿಹಾಸವನ್ನು ವಾಸ್ತವವಾಗಿ ಗಮನಿಸಿದರೆ ಧರ್ಮವು ಇಷ್ಟೊಂದು ಪ್ರಮುಖ ಸ್ಥಾನ ಪಡೆದಿರುವ ಮತ್ತೊಂದು ದೇಶ ಕಂಡುಬರುವುದಿಲ್ಲ ಎಂದು ಚಿಂತಕ ಹಾಗೂ ಪ್ರಾಧ್ಯಾಪಕ ಡಾ. ಶ್ರೀನಿವಾಸ ದೊಡಮನಿ ಹೇಳಿದರು.

ಕರ್ನಾಟಕ ಸರ್ಕಾರದ ಪುಸ್ತಕ ಪ್ರಾಧಿಕಾರದ ವತಿಯಿಂದ ಶಂಕರ ಬೈಚಬಾಳ ಅವರ ಮನೆಯಲ್ಲಿ ನಡೆದ 'ಮನೆ–ಮನೆ ಗ್ರಂಥಾಲಯ' ಕಾರ್ಯಕ್ರಮದಲ್ಲಿ ಶಂಕರ ಬೈಚಬಾಳ ಅವರ ಬದುಕು ಮತ್ತು ಬರಹ ಕುರಿತು ಉಪನ್ಯಾಸ ನೀಡಿದ ಅವರು, ವೈಚಾರಿಕ ಚರ್ಚೆ ಹಾಗೂ ಸಂವಾದಗಳ ಮೂಲಕ ಧಾರ್ಮಿಕ ಚಿಂತನೆಗಳು ಸಾಮಾಜಿಕ ಮತ್ತು ರಾಜಕೀಯ ಜಾಗೃತಿಗೆ ಕಾರಣವಾಗಿವೆ ಎಂದರು.

ಶಂಕರ ಬೈಚಬಾಳ ಅವರ 'ವಂದೇ ಮಾತರಂ–ಸಲಂ', 'ಭೂಮಿತೂಕದ ಜಕ್ಕ', 'ಮಸಬಿನಾಳದ ಪಶುವಾದಿ ಕಥೆಗಳು' ಮೊದಲಾದ ಕೃತಿಗಳು ಆ ಕಾಲಘಟ್ಟದ ಸಾಮಾಜಿಕ ಸ್ಥಿತ್ಯಂತರಗಳನ್ನು ಕನ್ನಡದ ಶ್ರೀಮಂತ ಬರಹದ ಮೂಲಕ ದಾಖಲಿಸಿವೆ. ಈ ಕೃತಿಗಳನ್ನು ಓದಿದಾಗ ಶತಮಾನಗಳ ಹಿಂದೆ ಬದುಕಿದ್ದ ಸಮಾಜದ ಚಿತ್ರಣ ನಮ್ಮ ಕಣ್ಣ ಮುಂದೆ ಮೂಡುತ್ತದೆ ಎಂದು ಅವರು ಹೇಳಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ಡಾ. ಕುಶಾಲ ಬರಗೂರು ಅವರು ಶಂಕರ ಬೈಚಬಾಳ ಅವರ ಮನೆಯಲ್ಲಿ ಗ್ರಂಥಾಲಯವನ್ನು ಉದ್ಘಾಟಿಸಿ ಮಾತನಾಡಿ, ಮನೆ ಕಟ್ಟುವಾಗ ದೇವರ ಮನೆಗೆ ಜಾಗ ಮೀಸಲಿಡುವಂತೆ ಪುಸ್ತಕಗಳಿಗಾಗಿ ಮನೆಯಲ್ಲೂ ಪ್ರತ್ಯೇಕ ಜಾಗ ಕಲ್ಪಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿ ಡಾ. ಬಸವರಾಜ ಜಾಲವಾದಿ ಮಾತನಾಡಿ, ಶಂಕರ ಬೈಚಬಾಳ ಅವರ ಬರಹಗಳು ಮೇಲಿದ್ದವರನ್ನು ಕೆಳಗೆ ತುಳಿಯುವುದಕ್ಕಿಂತ ಕೆಳಗಿದ್ದವರನ್ನು ಮೇಲೆತ್ತುವ ಪ್ರಗತಿಯ ಸಂದೇಶ ನೀಡುತ್ತವೆ ಎಂದು ಅಭಿಪ್ರಾಯಪಟ್ಟರು.

ಸಾಹಿತಿ ಸಿದ್ದಲಿಂಗ ಮನಹಳ್ಳಿ ಮಾತನಾಡಿ, ಮನೆ ಗ್ರಂಥಾಲಯಗಳು ಸಣ್ಣ ಮಟ್ಟದಲ್ಲಿದ್ದರೂ ಸಾಹಿತ್ಯದ ಪುಸ್ತಕಗಳನ್ನು ಓದುವ ಅಭಿರುಚಿಯನ್ನು ಬೆಳೆಸುವಲ್ಲಿ ಅವು ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ಪ್ರೊ. ಅಡವಿಸ್ವಾಮಿ ಕೊಳಮಲಿ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆಯಲ್ಲಿ ಪ್ರೊ. ಬಸವರಾಜ ಸಾಲವಾಡಗಿ, ಸಿದ್ದರಾಮಯ್ಯ ಯರನಾಳ, ಸುಪ್ರಿಯಾ ಬೈಚಬಾಳ, ಆರ್.ಡಿ. ಜೋಶಿ, ಸುಜ್ಞಾನಿ ಪಾಟೀಲ, ಮಹಾಂತೇಶ ಹರಗುಬಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕನಿಷ್ಠ ವೇತನಕ್ಕೆ 'ತಡೆ' ಪ್ರಸ್ತಾವನೆ; ಕಾರ್ಮಿಕರ ಆಕ್ರೋಶ

ವಿಜಯಪುರ : ರಾಜ್ಯ ಸರ್ಕಾರ ಮೇ 22ರಂದು ಹೊರಡಿಸಿರುವ ಪರಿಷ್ಕೃತ ಕನಿಷ್ಠ ವೇತನದ ಅಂತಿಮ ಅಧಿಸೂಚನೆಯನ್ನು ಅಮಾನತಿನಲ್ಲಿಡುವ ಹಣಕಾಸು ಇಲಾಖೆಯ ಪ್ರಸ್ತಾವನೆಗೆ ವಿವಿಧ ಕಾರ್ಮಿಕ ಸಂಘಟನೆಗಳು ತೀವ್ರ ವಿರೋಧ ವ್ಯಕ್ತಪಡಿಸಿವೆ. ನ್ಯಾಯಾಲಯವೇ ತಡೆಯಾಜ್ಞೆ ನೀಡಲು ನಿರಾಕರಿಸಿರುವಾಗ, ಆಡಳಿತಾತ್ಮಕವಾಗಿ ಅಧಿಸೂಚನೆಗೆ ತಡೆ ಹೇರುವ ಪ್ರಯತ್ನ ಏಕೆ? ಎಂದು ಪ್ರಶ್ನಿಸಿರುವ ಸಂಘಟನೆಗಳು, ಕೂಡಲೇ ಪ್ರಸ್ತಾವನೆ ಕೈಬಿಟ್ಟು ಪರಿಷ್ಕೃತ ಕನಿಷ್ಠ ವೇತನವನ್ನು ರಾಜ್ಯಾದ್ಯಂತ ಜಾರಿಗೊಳಿಸುವಂತೆ ಆಗ್ರಹಿಸಿವೆ.



ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದ ಸಂಘಟನೆಗಳು, ಕನಿಷ್ಠ ವೇತನ ಪರಿಷ್ಕರಣೆಯ ಅಂತಿಮ ಅಧಿಸೂಚನೆ ಈಗಾಗಲೇ ಜಾರಿಯಲ್ಲಿದ್ದು, ಖಾಸಗಿ ಕ್ಷೇತ್ರದಲ್ಲಿ ಕಾರ್ಮಿಕರಿಗೆ ವೇತನ ಪಾವತಿಸುವ ಪ್ರಕ್ರಿಯೆಯೂ ಆರಂಭವಾಗಿದೆ. ಇಂತಹ ಸಂದರ್ಭದಲ್ಲಿ ಹಣಕಾಸು ಇಲಾಖೆ ಅಧಿಸೂಚನೆಯನ್ನು ಅಮಾನತಿನಲ್ಲಿಡಲು ಮುಂದಾಗಿರುವುದು ಕಾರ್ಮಿಕ ವಿರೋಧಿ ಹಾಗೂ ಕಾನೂನುಬಾಹಿರ ಕ್ರಮ ಎಂದು ಆರೋಪಿಸಿವೆ.

ಮಾಲೀಕರ ಸಂಘಟನೆಗಳು ಕರ್ನಾಟಕ ಹೈಕೋರ್ಟ್‌ನಲ್ಲಿ ತಡೆಯಾಜ್ಞೆ ಕೋರಿದ್ದರೂ ನ್ಯಾಯಾಲಯ ಅದನ್ನು ನಿರಾಕರಿಸಿದೆ. ಹೀಗಾಗಿ ನ್ಯಾಯಾಲಯ ತಡೆ ನೀಡದ ವಿಚಾರವನ್ನು ಆಡಳಿತಾತ್ಮಕವಾಗಿ ತಡೆಹಿಡಿಯಲು ಸಾಧ್ಯವಿಲ್ಲ. ಸರ್ಕಾರ ಕೂಡಲೇ ಯಾವುದೇ ತಡೆ ಪ್ರಸ್ತಾವನೆಯನ್ನು ಕೈಬಿಟ್ಟು, ಕಾರ್ಮಿಕರಿಗೆ ಪರಿಷ್ಕೃತ ಕನಿಷ್ಠ ವೇತನ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

"ವೇತನ ಪರಿಷ್ಕರಣೆ ಮಾಡಿ ಅಧಿಸೂಚನೆ ಹೊರಡಿಸಿ, ಜಾರಿ ವೇಳೆಗೆ ತಡೆ ಏಕೆ?" ಎಂಬ ಪ್ರಶ್ನೆ ಈಗ ಕಾರ್ಮಿಕ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಎಐಟಿಯುಸಿ, ಕರ್ನಾಟಕ ರಾಜ್ಯ ಬಹುಹಳ್ಳಿ ಕುಡಿಯುವ ನೀರು ಸರಬರಾಜು ನೌಕರರ ಸಂಘ, ಸಂಯುಕ್ತ ಕೆಬಿಜೆಎನ್‌ಎಲ್ ಆಲಮಟ್ಟಿ ಗಾರ್ಡನ್ ನೌಕರರ ಸಂಘ ಹಾಗೂ ವಸತಿ ನಿಲಯ ಕಾರ್ಮಿಕರ ಸಂಘ ಸೇರಿದಂತೆ ವಿವಿಧ ಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳು ಮನವಿ ಸಲ್ಲಿಸಿದರು.

ಕನಿಷ್ಠ ವೇತನ ಪರಿಷ್ಕರಣೆಗೆ ಸಂಬಂಧಿಸಿದ ಪ್ರಕ್ರಿಯೆ ಈಗಾಗಲೇ ಸುಮಾರು ಐದು ವರ್ಷಗಳಿಂದ ವಿಳಂಬವಾಗಿದ್ದು, ಮತ್ತಷ್ಟು ವಿಳಂಬ ಮಾಡುವುದು ಕಾರ್ಮಿಕರಿಗೆ ಅನ್ಯಾಯವಾಗಲಿದೆ ಎಂದು ಕಾರ್ಮಿಕ ಸಂಘಟನೆಗಳ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

2016ರ ನಂತರ 2021ರಲ್ಲಿ ಕನಿಷ್ಠ ವೇತನ ಪರಿಷ್ಕರಣೆ ಆಗಬೇಕಾಗಿದ್ದರೂ ಸರ್ಕಾರದ ವಿಳಂಬ ನೀತಿಯಿಂದಾಗಿ 2026ರಲ್ಲಿ ಅಧಿಸೂಚನೆ ಹೊರಬಂದಿದೆ. ಇದೀಗ ಮತ್ತೆ ಅದನ್ನು ತಡೆಹಿಡಿಯುವ ಪ್ರಯತ್ನ ನಡೆಯುತ್ತಿರುವುದು ಖಂಡನೀಯ.

ಮೇ 22, 2026ರಂದು ಹೊರಡಿಸಿರುವ ಕನಿಷ್ಠ ವೇತನ ಅಧಿಸೂಚನೆಯನ್ನು ಅಮಾನತಿನಲ್ಲಿಡುವ ಹಣಕಾಸು ಇಲಾಖೆಯ ಪ್ರಸ್ತಾವನೆಯನ್ನು ತಕ್ಷಣ ತಿರಸ್ಕರಿಸಬೇಕು ಎಂದು ಅವರು ಆಗ್ರಹಿಸಿದರು.

ಪರಿಷ್ಕೃತ ಕನಿಷ್ಠ ವೇತನವನ್ನು ರಾಜ್ಯದ ಎಲ್ಲ ಸರ್ಕಾರಿ ಇಲಾಖೆಗಳು, ನಿಗಮ–ಮಂಡಳಿಗಳು, ಸ್ಥಳೀಯ ಸಂಸ್ಥೆಗಳು ಹಾಗೂ ಖಾಸಗಿ ಸಂಸ್ಥೆಗಳು, ಹೊರಗುತ್ತಿಗೆ ಸಂಸ್ಥೆಗಳು, ವಿಂಡ್ ಎನರ್ಜಿ, ಸೋಲಾರ್ ಎನರ್ಜಿ ಸೇರಿದಂತೆ ಎಲ್ಲ ಉದ್ಯೋಗ ಕ್ಷೇತ್ರಗಳಲ್ಲಿ ಕೂಡಲೇ ಜಾರಿಗೊಳಿಸಬೇಕು.

ಕಾರ್ಮಿಕರಿಗೆ ಬಾಕಿ ಇರುವ ವೇತನವನ್ನೂ ತಕ್ಷಣ ಪಾವತಿಸಬೇಕು ಎಂದು ಒತ್ತಾಯಿಸಿದರು.

# ಮುದ್ದೇಬಿಹಾಳದಲ್ಲಿ ಕನಕ ತೀರ್ಥರ ಶೋಭಾಯಾತ್ರೆ ವೈಭವ

ಮುದ್ದೇಬಿಹಾಳ, ಆ. 10: ಚಾತುರ್ಮಾಸ್ಯ ವ್ರತ ಕೈಗೊಂಡ ಹುಣಸಿಹೊಳಿ ಕನಕ ಮಠದ ಪೀಠಾಧಿಪತಿ ಶ್ರೀ ವಿದ್ಯಾ ಕನಕವಿರಾಜ ತೀರ್ಥರ ಶೋಭಾಯಾತ್ರೆ ಮುದ್ದೇಬಿಹಾಳದಲ್ಲಿ ಭಕ್ತಿ ಹಾಗೂ ವೈಭವದಿಂದ ನಡೆಯಿತು.

ಶ್ರೀ ವಿದ್ಯಾ ಕನಕವಿರಾಜ ತೀರ್ಥರು ಮುದ್ದೇಬಿಹಾಳದಲ್ಲಿ 7ನೇ ಚಾತುರ್ಮಾಸ್ಯ ವ್ರತ ಕೈಗೊಳ್ಳಬೇಕೆಂಬ ಮುದ್ದೇಬಿಹಾಳ ಬ್ರಾಹ್ಮಣ ಸಮುದಾಯದ ಮನವಿಯ ಮೇರೆಗೆ ಆ.8ರಿಂದ ಸೆ.26ರವರೆಗೆ ಚಾತುರ್ಮಾಸ್ಯ ವ್ರತಾಚರಣೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಆ.8ರಂದು ಸುಕ್ಷೇತ್ರ ಶ್ರೀ ಯಲಗೂರಿನ ಕೃಷ್ಣಾ ನದಿತೀರದಲ್ಲಿ ಶ್ರೀಪಾದಂಗಳವರಿಂದ ದಂಡೋದಕ ಸ್ನಾನ ನೆರವೇರಿಸಲಾಯಿತು. ಬಳಿಕ ಮುದ್ದೇಬಿಹಾಳದಲ್ಲಿ ಸಂಕಲ್ಪಪೂರ್ವಕ ಚಾತುರ್ಮಾಸ್ಯ ದೀಕ್ಷೆ ಸ್ವೀಕರಿಸಲು ಆಗಮಿಸಿದ ಶ್ರೀಗಳಿಗೆ ಅದ್ದೂರಿ ಸ್ವಾಗತ ನೀಡಲಾಯಿತು.

ಮುದ್ದೇಬಿಹಾಳದ ಶ್ರೀ ರಾಘವೇಂದ್ರ ಮಠದಿಂದ ಸಕಲ ವಾದ್ಯ, ವೇದಘೋಷ ಹಾಗೂ ಭಜನಾ ಮಂಡಳಿಗಳ ಭಜನೆಯೊಂದಿಗೆ ಮೆರವಣಿಗೆ ಆರಂಭಗೊಂಡಿತು. ಮಹಿಳೆಯರು ಕೋಲಾಟ ಪ್ರದರ್ಶಿಸುವ ಮೂಲಕ ಮೆರವಣಿಗೆಗೆ ಮೆರುಗು ನೀಡಿ–ದರು. ಮಾರುತಿ ಮಂದಿರದ ಮೂಲಕ ಶ್ರೀ ಶಿವ ದಂಬರ ದೇವಾಲಯದವರೆಗೆ ಶೋಭಾಯಾತ್ರೆ ನಡೆಯಿತು. ಅಪಾರ ಸಂ–ಖ್ಯೆಯ ಭಕ್ತರು ಪಾಲ್ಗೊಂಡು ಶ್ರೀಗಳ ದರ್ಶನ ಪಡೆದು ಆಶೀರ್ವಾದ ಪಡೆದರು.



ಚಾತುರ್ಮಾಸ್ಯ ವ್ರತದ ಆರಂಭದ ಅಂಗವಾಗಿ ಶ್ರೀಗಳಿಗೆ ಪಾದಪೂಜೆ, ಉಪನ್ಯಾಸ, ಭಜನೆ, ಶ್ರೀಮಠದ ಉಪಾಸ್ಯಮೂರ್ತಿ ಶ್ರೀ ವಿಶ್ವಲಕೃಷ್ಣನ ಸಂಸ್ಥಾನ ಪೂಜೆ, ಗುರುಗಳಿಗೆ ಭಿಕ್ಷೆ, ಹಸ್ತೋದಕ, ತೊಟ್ಟಿಲು ಪೂಜೆ ಸೇರಿದಂತೆ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದವು.

ಅನೇಕ ಭಕ್ತರು ಆಗಮಿಸಿ ತನು–ಮನ–ಧನದಿಂದ ಸೇವೆ ಸಲ್ಲಿಸಿ ಶ್ರೀ ರುಕ್ಮಿಣಿ ಸತ್ಯಭಾಮಾ ಸಮೇತ ಶ್ರೀ ವಿಠ್ಠಲಕೃಷ್ಣನ ಅನುಗ್ರಹಕ್ಕೆ ಪಾತ್ರರಾದರು. ಕನಕ ಮಠದ ಕಾರ್ಯಾಧ್ಯಕ್ಷ ರಾಘವೇಂದ್ರ ಜಿ. ಆಲಗೂರು, ಗುಂಡಭಟ್ಟ ಡಾ. ಜೋಶಿ, ಶಂಕರಭಟ್ಟ ಜ್ಯೋತಿ, ವೆಂಕಟೇಶಾಚಾರ್ಯ ಗ್ರಾಮಪುರೋಹಿತ ತಾಳಿಕೋಟಿ, ಎಸ್. ಆರ್. ಕುಲಕರ್ಣಿ, ಶ್ರೀ ರಾಘವೇಂದ್ರ ಮಠದ ಪದಾಧಿಕಾರಿಗಳು, ವಿನಾಯಕ ರಾವ್ ಬಿ. ಶುಲಕರ್ಣಿ, ತಾಲ್ಲೂಕು ಬ್ರಾಹ್ಮಣ ಮಹಾಸಭೆಯ ಅಧ್ಯಕ್ಷರು, ವಾಸುದೇವ ಶಾಸ್ತ್ರಿ ಗಣ್ಯ ವಾಪಾರಸ್ಥರು, ಸತೀಶಚಂದ್ರ ಜಿ. ಕುಲಕರ್ಣಿ, ಗುಂಡಭಟ್ಟ ಜೋಶಿ (ಕಾಳಗಿ), ಶ್ರೀನಿವಾಸಾಚಾರ್ಯ ಗಜೇಂದ್ರಗಡ, ಗುರುರಾಜ ಆಚಾರ್ಯ ರಾಜಪುರೋಹಿತ, ಬಾಪುರಾವ್ ದೇಸಾಯಿ, ಶ್ರೀ ಆರೇಮಲ್ಲಯ್ಯ ದೇವಸ್ಥಾನ ಸುಲ್ತಾನಪುರದ ಅಧ್ಯಕ್ಷರು, ಅನೀಲಕುಮಾರ್ ಎಚ್. ಕುಲಕರ್ಣಿ, ಕೃಷ್ಣಾಜಿ ಕುಲಕರ್ಣಿ (ಬಳಬಟ್ಟಿ), ಮಟ್ಟು ಕುಲಕರ್ಣಿ, ಪ್ರಶಾಂತ ಯ., ಸರಾಫ್, ವಾಸುದೇವ ಸೇರಿದಂತೆ ಹಲವರು ಶೋಭಾಯಾತ್ರೆಯ ಯಶಸ್ಸಿಗೆ ಸಹಕರಿಸಿದರು.

# ಶಿರಾ ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ: ಆ.12ರಂದು 1 ಸಾವಿರ ಬೈಕ್‌ಗಳ ರ್‍ಯಾಲಿ

## ಸಮಸ್ಯೆ ಬಗೆಹರಿಯದಿದ್ದರೆ ವಿಧಾನಸೌಧ ಮುತ್ತಿಗೆ: ಚಿದಾನಂದ್ ಎಂ. ಗೌಡ ಎಚ್ಚರಿಕೆ



ಶಿರಾ : ತಾಲೂಕಿನಲ್ಲಿ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ರೈತರ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳು ಒಣಗುತ್ತಿವೆ. ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿಗೂ ತೀವ್ರ ಸಮಸ್ಯೆ ಎದುರಾಗಿರುವ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ಮಧುಗಿರಿ ಸಂಘಟನಾತ್ಮಕ ಜಿಲ್ಲಾ ಬಿಜೆಪಿ ಅಧ್ಯಕ್ಷ ಚಿದಾನಂದ್ ಎಂ. ಗೌಡ ಆಗ್ರಹಿಸಿದರು.

ನಗರದ ಸೇವಾ ಸದನದಲ್ಲಿ ಭಾನುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಡಿಕೆ, ತೆಂಗು, ದಾಳಿಂಬೆ, ಶೇಂಗಾ ಸೇರಿದಂತೆ ವಿವಿಧ ಬೆಳೆಗಳು ನೀರಿನ ಕೊರತೆಯಿಂದ ಹಾನಿಗೊಳಗಾಗಿವೆ. ಕಳ್ಳಂಬೆಳ್ಳ, ಗೌಡಗೆರೆ, ಹುಲಿಕುಂಟೆ ಹಾಗೂ ಕಸಬಾ ಹೋಬಳಿಗಳ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದೆ ಎಂದು ಹೇಳಿದರು.

ಹಲವು ವರ್ಷಗಳಿಂದ ಭರವಸೆ, ಇನ್ನೂ ಶಾಶ್ವತ ಪರಿಹಾರವಿಲ್ಲ ಕಳೆದ ಹಲವು ವರ್ಷಗಳಿಂದ ಕಳ್ಳಂಬೆಳ್ಳ ಕೆರೆ ಹಾಗೂ ಶಿರಾ ಕೆರೆಗೆ ನೀರು ಹರಿಸುವ ಬಗ್ಗೆ ಭರವಸೆ ನೀಡಲಾಗುತ್ತಿದೆ. ಆದರೆ ಇದುವರೆಗೂ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆತಿಲ್ಲ. ಕಳ್ಳಂಬೆಳ್ಳ ಹೋಬಳಿಯ ಹಲವು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿಯೂ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ ಎಂದು ಚಿದಾನಂದ್ ಆರೋಪಿಸಿದರು. ಗೌಡಗೆರೆ ಹೋಬಳಿಯ ಭುವನಹಳ್ಳಿ, ಲಕ್ಷ್ಮೀಸಾಗರ, ರತ್ನಸಂದ್ರ, ಮಾಗೋಡು, ಹೊನ್ನಗೊಂಡನಹಳ್ಳಿ ಸೇರಿದಂತೆ ಹಲವು ಗ್ರಾಮಗಳಲ್ಲಿ ಜನರು ಕುಡಿಯುವ ನೀರಿಗಾಗಿ ಪರದಾಡುತ್ತಿದ್ದಾರೆ.

ಕೆಲವು ಕಡೆ ಮಹಿಳೆಯರು ತೋಟಗಳಲ್ಲಿರುವ ಕೊಳವೆಬಾವಿಗಳ ಬಳಿ ತೆರಳಿ ನೀರು ಪಡೆಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

24 ಕೋಟಿ ವೆಚ್ಚವಾದರೂ ನೀರು ಪೂರೈಕೆಯಾಗಿಲ್ಲ ಯಲಿಯೂರು ಕೆರೆಯಿಂದ ಏಳು–ಎಂಟು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಸುಮಾರು 44 ಗ್ರಾಮಗಳಿಗೆ ಕುಡಿಯುವ ನೀರು ಪೂರೈಸುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಸುಮಾರು 24 ಕೋಟಿ ವೆಚ್ಚ ಮಾಡಲಾಗಿದೆ. ಪೈಪ್‌ಲೈನ್ ಕಾಮಗಾರಿ ನಡೆದಿದ್ದರೂ ಇದುವರೆಗೂ ಒಂದೇ ಒಂದು ಗ್ರಾಮಕ್ಕೂ ಸಮರ್ಪಕವಾಗಿ ನೀರು ಪೂರೈಕೆಯಾಗಿಲ್ಲ ಎಂದು ಚಿದಾನಂದ್ ಎಂ. ಗೌಡ ಆರೋಪಿಸಿದರು. ಯಲಿಯೂರು ಕೆರೆ ಹಲವು ಬಾರಿ ತುಂಬಿದ್ದರೂ ಅದರ ನೀರನ್ನು ಜನರಿಗೆ ಕುಡಿಯಲು ಪೂರೈಸದಿರುವುದಕ್ಕೆ ಕಾರಣವೇನು ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು.

ಕಾಮಗಾರಿಗೆ ಖರ್ಚಾದ ಹಣದ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. 1 ಕೋಟಿ ಅನುದಾನ ಸಾಲದು ತಾಲೂಕಿನ ಬರ ಪರಿಸ್ಥಿತಿ ನಿರ್ವಹಣೆಗೆ ಸರ್ಕಾರ ನೀಡಿರುವ ಅನುದಾನ ಸಾಕಾಗುವುದಿಲ್ಲ. ಕೇವಲ 1 ಕೋಟಿಯಲ್ಲಿ ತಾಲೂಕಿನ ಎಲ್ಲ ಭಾಗಗಳ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸಾಧ್ಯವಿಲ್ಲ. ಹಲವು ಕಡೆ ಕೊಳವೆಬಾವಿಗಳನ್ನು ಕೊರೆದರೂ ನೀರು ದೊರೆಯದ ಪರಿಸ್ಥಿತಿ ಇದೆ. ಆದ್ದರಿಂದ ಸರ್ಕಾರ ಶಾಶ್ವತ ಪರಿಹಾರದತ್ತ ಗಮನಹರಿಸಬೇಕು ಎಂದು ಹೇಳಿದರು.

ಅಪ್ಪರ್ ಭದ್ರಾ ಯೋಜನೆಯ ನೀರು ಶಿರಾ ತಾಲೂಕಿಗೆ ಬಂದರೂ ತಾಲೂಕಿನ ಸಂಪೂರ್ಣ ಅಗತ್ಯವನ್ನು ಅದು ಪೂರೈಸುವುದಿಲ್ಲ. ಕನಿಷ್ಠ 2ರಿಂದ 3 ಟಿಎಂಸಿ ನೀರನ್ನು ಶಿರಾ ತಾಲೂಕಿಗೆ ಮೀಸಲಿಡಬೇಕು. ಇದರಿಂದ ರೈತರು ಹಾಗೂ ಗ್ರಾಮೀಣ ಜನರಿಗೆ ಅನುಕೂಲವಾಗಲಿದೆ ಎಂದು ಚಿದಾನಂದ್ ಹೇಳಿದರು. ಆ.12ರಂದು 1 ಸಾವಿರ ಬೈಕ್‌ಗಳ ರ್‍ಯಾಲಿ : ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವಂತೆ ಒತ್ತಾಯಿಸಿ ಆಗಸ್ಟ್ 12ರಂದು ಸುಮಾರು 1 ಸಾವಿರ ಬೈಕ್‌ಗಳ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಚಿದಾನಂದ್ ಎಂ. ಗೌಡ ತಿಳಿಸಿದರು.

ತಾಲೂಕಿನ ವಿವಿಧ ಹೋಬಳಿಗಳ ರೈತರು, ಯುವಕರು ಹಾಗೂ ಮುಖಂಡರು ರ್‍ಯಾಲಿಯಲ್ಲಿ ಭಾಗವಹಿಸಲಿದ್ದು, ತಾವರೆಕೆರೆ, ಚಿರತಹಳ್ಳಿ, ಬರಗೂರು, ಪಟ್ಟನಾಯಕನಹಳ್ಳಿ ಕ್ರಾಸ್ ಸೇರಿದಂತೆ ವಿವಿಧ ಭಾಗಗಳಿಂದ ಬೈಕ್‌ಗಳಲ್ಲಿ ಆಗಮಿಸಿ ತಹಶೀಲ್ದಾರ್ ಕಚೇರಿಗೆ ತೆರಳಿ ಮನವಿ ಸಲ್ಲಿಸಲಿದ್ದಾರೆ.

ಕಸಬಾ, ಕಳ್ಳಂಬೆಳ್ಳ, ಗೌಡಗೆರೆ ಹಾಗೂ ಹುಲಿಕುಂಟೆ ಹೋಬಳಿಗಳ ಕುಡಿಯುವ ನೀರಿನ ಸಮಸ್ಯೆಗೆ ತಕ್ಷಣ ಪರಿಹಾರ ಕಲ್ಪಿಸುವಂತೆ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದರು.

"ನಮ್ಮ ಉದ್ದೇಶ ಹೋರಾಟ ಮಾಡುವುದಲ್ಲ; ಜನರಿಗೆ ನೀರು ದೊರಕಬೇಕು ಎಂಬುದಷ್ಟೇ. ಸರ್ಕಾರ ತಕ್ಷಣ ಸ್ಪಂದಿಸಿ ನೀರು ಒದಗಿಸಿದರೆ ಹೋರಾಟವನ್ನು ಕೈಬಿಟ್ಟು ಸರ್ಕಾರಕ್ಕೆ ಧನ್ಯವಾದ ಸಲ್ಲಿಸುತ್ತೇವೆ. ಆದರೆ ಸಮಸ್ಯೆಯನ್ನು ನಿರ್ಲಕ್ಷಿಸಿದರೆ ಮುಂದಿನ ಹಂತದಲ್ಲಿ ವಿಧಾನಸೌಧ ಮುತ್ತಿಗೆ ಸೇರಿದಂತೆ ಉಗ್ರ ಹೋರಾಟ ನಡೆಸಲಾಗುವುದು," ಎಂದು ಚಿದಾನಂದ್ ಎಂ. ಗೌಡ ಎಚ್ಚರಿಕೆ ನೀಡಿದರು.

ಶಿರಾ ತಾಲೂಕಿನ ರೈತರು ಹಾಗೂ ಜನಸಾಮಾನ್ಯರಿಗೆ ಶುದ್ಧ ಮತ್ತು ಸಮರ್ಪಕ ಕುಡಿಯುವ ನೀರು ಒದಗಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡರು, ರೈತ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬರದ ಬವಣೆಗೆ ಸರ್ಕಾರದ ಸ್ಪಂದನೆ:

## ಪಾವಗಡದಲ್ಲಿ ರೈತರಿಗೆ ಮೇವಿನ ಬೀಜ, ಹಾಲು ಉತ್ಪಾದಕರಿಗೆ ಚೆಕ್ ವಿತರಿಸಿದ ಡಿಸಿಎಂ ಪರಮೇಶ್ವರ್



ಪಾವಗಡ : ಬರ ಪರಿಸ್ಥಿತಿಯ ಪರಿಶೀಲನೆಗಾಗಿ ಪಾವಗಡಕ್ಕೆ ಭೇಟಿ ನೀಡಿದ ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರು ಶಾಸಕ ಹೆಚ್.ವಿ. ವೆಂಕಟೇಶ್ ಅವರೊಂದಿಗೆ ನಂದಿನಿ ಉಪಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ಜೋಳದ ಮೇವಿನ ಬೀಜದ ಮಿನಿ ಕಿಟ್‌ಗಳನ್ನು ಹಾಗೂ ಹಾಲು ಉತ್ಪಾದಕರ ಸಂಘಗಳಿಗೆ ಚೆಕ್‌ಗಳನ್ನು ವಿತರಿಸಿದರು.

ಬಳಿಕ ಮಾತನಾಡಿದ ಅವರು, ಮಳೆಯ ಕೊರತೆಯಿಂದ ಪಾವಗಡ ತಾಲೂಕಿನಲ್ಲಿ ಕಡಲೆಕಾಯಿ ಸೇರಿದಂತೆ ಬಹುತೇಕ ಬೆಳೆಗಳು ಸಂಪೂರ್ಣ ಹಾನಿಗೊಳಗಾಗಿದ್ದು, ಜಾನುವಾರುಗಳಿಗೆ ಮೇವಿನ ತೀವ್ರ ಕೊರತೆ ಉಂಟಾಗಿದೆ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ತುಮಕೂರು ಹಾಲು ಒಕ್ಕೂಟದ (ಕೆಎಂಎಫ್) ವತಿಯಿಂದ ಜಿಲ್ಲಾದ್ಯಂತ 1 ಲಕ್ಷ ಮೇವಿನ ಮಿನಿ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ಎಂದು ತಿಳಿಸಿದರು. ರೈತರು ಲಭ್ಯವಿರುವ ನೀರಿನ ಮೂಲಗಳನ್ನು ಬಳಸಿಕೊಂಡು ಮೇವಿನ ಬೆಳೆ ಬೆಳೆಯುವಂತೆ ಸಲಹೆ ನೀಡಿದರು.

ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿರುವ ಹಿನ್ನೆಲೆಯಲ್ಲಿ ತುರ್ತು ಕಾಮಗಾರಿಗಳಿಗಾಗಿ ತುಮಕೂರು ಜಿಲ್ಲೆಗೆ 11 ಕೋಟಿ ಹಾಗೂ ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 1 ಕೋಟಿ ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ ಎಂದು ಡಿಸಿಎಂ ತಿಳಿಸಿದರು. ರೈತರು ಮತ್ತು ಹಾಲು ಉತ್ಪಾದಕರ ಹಿತಾಸಕ್ತಿಗೆ ಸರ್ಕಾರ ಸದಾ ಬದ್ಧವಾಗಿದೆ ಎಂದು ಅವರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್, ಉಪ ವಿಭಾಗಾಧಿಕಾರಿ ಗೂಟೂರು ಶಿವಪ್ಪ, ಡಿವೈಎಸ್ಪಿ ಮಂಜುನಾಥ್, ತಹಶೀಲ್ದಾರ್ ವೈ. ರವಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಹಾಲು ಉತ್ಪಾದಕರ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಆ.13ರಂದು 'ಹರ್ ಘರ್ ತಿರಂಗಾ' ಬೈಕ್ ರ್‍ಯಾಲಿ

ಜಗಳೂರು : ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಧರ್ಮನಾಯ್ಕ ಮಾತನಾಡಿ, ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆ.13ರಂದು ಬಿಜೆಪಿ ಯುವ ಮೋರ್ಚಾ ವತಿಯಿಂದ 'ಹರ್ ಘರ್ ತಿರಂಗಾ' ಅಭಿಯಾನದಡಿ ಬೈಕ್ ರ್‍ಯಾಲಿ ಆಯೋಜಿಸಲಾಗಿದೆ ಎಂದು ತಿಳಿಸಿದರು. ಅಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಮಾರಿಕಾಂಬ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ರ್‍ಯಾಲಿಗೆ ಚಾಲನೆ ನೀಡಲಾಗುವುದು.

ಬಳಿಕ ಪಟ್ಟಣದ ಪ್ರಮುಖ ರಸ್ತೆಗಳ ಮೂಲಕ ಸಂಚರಿಸಿ ಡಾ. ಬಿ.ಆರ್. ಅಂಬೇಡ್ಕರ್ ವೃತ್ತ ತಲುಪಿ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ತಾಲ್ಲೂಕಿನಾದ್ಯಂತ 1,000 ತ್ರಿವರ್ಣ ಧ್ವಜಗಳನ್ನು ಮನೆಗಳ ಮೇಲೆ ಹಾರಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

# ಜಿಲ್ಲಾ ಮಟ್ಟದ ಡಾ. ಬಾಬು ಜಗಜೀವನ ರಾಮ್ ಪ್ರಶಸ್ತಿ ಪುರಸ್ಕೃತ ದೇವರಾಜುಗೆ ಸನ್ಮಾನ



ಶಿರಾ: ಜಿಲ್ಲಾ ಮಟ್ಟದ ಡಾ. ಬಾಬು ಜಗಜೀವನ ರಾಮ್ ಪ್ರಶಸ್ತಿಗೆ ಭಾಜನರಾದ ಶಿರಾ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದೇವರಾಜು ಅವರನ್ನು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು.

ಶಿರಾ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ದೇವರಾಜು ಅವರನ್ನು ಸನ್ಮಾನಿಸಿ, ಅವರ ಸಮಾಜಮುಖಿ ಕಾರ್ಯಗಳು ಹಾಗೂ ಪತ್ರಿಕೋದ್ಯಮ ಕ್ಷೇತ್ರದ ಸೇವೆಯನ್ನು ಅಧಿಕಾರಿಗಳು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ವಿ.ಕೆ. ಬಡಿಗೇರ ಸೇರಿದಂತೆ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದು, ದೇವರಾಜು ಅವರಿಗೆ ಶುಭ ಹಾರೈಸಿದರು.

ಸಾಮಾಜಿಕ ಸೇವೆ ಹಾಗೂ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಜಿಲ್ಲಾ ಮಟ್ಟದ ಪ್ರಶಸ್ತಿ ಲಭಿಸಿರುವುದು ಹೆಮ್ಮೆಯ ಸಂಗತಿ ಎಂದು ಅಧಿಕಾರಿಗಳು ಅಭಿನಂದಿಸಿದರು.

# ಅಂಗನವಾಡಿ ಮಕ್ಕಳಿಗೆ ಜೇನಿ ಸಂಸ್ಥೆಯ ಮಾಲೀಕ ದಿಲೀಪ್ ಕುಮಾರ್ ಸಮವಸ್ತ್ರ ವಿತರಣೆ



ಶಿರಾ: ತಾಲ್ಲೂಕಿನ ರಾಗಳಹಳ್ಳಿ ಗ್ರಾಮದಲ್ಲಿರುವ ಅಂಗನವಾಡಿ ಕೇಂದ್ರದಲ್ಲಿ ಜೇನಿ ಸಂಸ್ಥೆ ವತಿಯಿಂದ ಅಂಗನವಾಡಿ ಮಕ್ಕಳಿಗೆ ಸಮವಸ್ತ್ರ ವಿತರಿಸುವ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಅಂಗನವಾಡಿ ಮಕ್ಕಳಿಗೆ ಅಗತ್ಯವಾದ ಸಮವಸ್ತ್ರಗಳನ್ನು ವಿತರಿಸಿ, ಮಕ್ಕಳ ಶಿಕ್ಷಣದ ಜೊತೆಗೆ ಅವರ ಆರೋಗ್ಯಕರ ಬೆಳವಣಿಗೆಗೆ ಉತ್ತೇಜನ ನೀಡಲಾಯಿತು.

ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರು, ಜೇನಿ ಸಂಸ್ಥೆಯ ಮಾಲೀಕ ದಿಲೀಪ್ ಕುಮಾರ್, ಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು. ಮಕ್ಕಳ ಶಿಕ್ಷಣ ಮತ್ತು ಕಲಿಕೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಜೇನಿ ಸಂಸ್ಥೆ ಕೈಗೊಂಡಿರುವ ಇಂತಹ ಸಾಮಾಜಿಕ ಸೇವಾ ಕಾರ್ಯಗಳು ಶ್ಲಾಘನೀಯವಾಗಿವೆ ಎಂದು ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು

# ವಚನದ ಬೆಳಕಿನಲ್ಲಿ ಸಮ ಸಮಾಜದ ಕನಸು! ಶರಣ ಸಾಹಿತ್ಯದ ಸಂಭ್ರಮ




ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಮಾಕುವಳ್ಳಿ ಗ್ರಾಮದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಲಾಗಿದ್ದ 'ಹಳ್ಳಿಗೊಂದು ವಚನದೀಪ' ಕಾರ್ಯಕ್ರಮವು ಅರ್ಥಪೂರ್ಣವಾಗಿ ಹಾಗೂ ಭಕ್ತಿಭಾವದ ವಾತಾವರಣದಲ್ಲಿ ಜರುಗಿತು. ಕಾರ್ಯಕ್ರಮದ ಆರಂಭದಲ್ಲಿ ಜಗಜ್ಯೋತಿ ಬಸವಣ್ಣನವರು ಹಾಗೂ ತ್ರಿವಿಧ ದಾಸೋಹಿ ಪರಮಪೂಜ್ಯ ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿಯವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಸಮಾರಂಭದ ಅಧ್ಯಕ್ಷತೆಯನ್ನು ವಕೀಲರಾದ ಶ್ರೀ ಬಸವರಾಜ್ ವಹಿಸಿದ್ದರು.

ವಚನ ಸಾಹಿತ್ಯ ಇಂದಿಗೂ ಪ್ರಸ್ತುತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ನಿವೃತ್ತ ಉಪನ್ಯಾಸಕ ಶ್ರೀ ಎಂ. ದಕ್ಷಿಣಾಮೂರ್ತಿ, ಶರಣರ ಅನುಭಾವದಿಂದ ಮೂಡಿಬಂದ ವಚನಗಳು ಕೇವಲ ಧಾರ್ಮಿಕ ವಿಚಾರಗಳಿಗೆ ಸೀಮಿತವಾಗಿಲ್ಲ. ಅವು ಮಾನವೀಯತೆ, ಸಮಾನತೆ, ಸತ್ಯ, ಕಾಯಕ, ದಾಸೋಹ ಹಾಗೂ ಸಾಮಾಜಿಕ ನ್ಯಾಯದಂತಹ ಮೌಲ್ಯಗಳನ್ನು ಪ್ರತಿಪಾದಿಸುತ್ತವೆ. ಇಂದಿನ ಸಮಾಜದಲ್ಲಿ ಎದುರಾಗುತ್ತಿರುವ ಹಲವು ಸಮಸ್ಯೆಗಳಿಗೆ ವಚನ ಸಾಹಿತ್ಯದಲ್ಲಿ ಸೂಕ್ತ ಮಾರ್ಗದರ್ಶನ ದೊರೆಯುತ್ತದೆ ಎಂದು ಹೇಳಿದರು.

ಯುವಜನರು ಹಾಗೂ ಮಕ್ಕಳಲ್ಲಿ ವಚನ ಸಾಹಿತ್ಯದ ಬಗ್ಗೆ ಆಸಕ್ತಿ ಬೆಳೆಸುವ ಮೂಲಕ ಶರಣರ ಚಿಂತನೆಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಬಸವಣ್ಣನವರ ಸಂದೇಶ ವಿಶ್ವಮಾನವ ಸಂದೇಶ

ಬರಗೂರು ಬೆಳಗುಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಭಾರಿ ಪ್ರಾಂಶುಪಾಲರಾದ ಆರ್. ಧನಂಜಯಮೂರ್ತಿ ಅವರು 'ಬಸವಣ್ಣನವರ ವಚನಗಳ ಜಾಗತಿಕ ಸಂದೇಶಗಳು' ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಬಸವಣ್ಣನವರು ಜಾತಿ, ವರ್ಣ, ವರ್ಗ ಹಾಗೂ ಲಿಂಗಭೇದವಿಲ್ಲದ ಸಮ ಸಮಾಜದ ಕನಸು ಕಂಡ ಮಹಾನ್ ಸಮಾಜ ಸುಧಾರಕರಾಗಿದ್ದರು. ಕಾಯಕವೇ ಕೈಲಾಸ, ದಾಸೋಹ ಹಾಗೂ ಸಮಾನತೆಯ ತತ್ವಗಳ ಮೂಲಕ ಸಮಾಜದಲ್ಲಿ ಹೊಸ ಚಿಂತನೆಗೆ ನಾಂದಿ ಹಾಡಿದರು. ಅವರ ವಚನಗಳು ಮನುಷ್ಯನನ್ನು ಮನುಷ್ಯನಾಗಿ ಕಾಣುವ ವಿಶ್ವಮಾನವ ಸಂದೇಶವನ್ನು ಸಾರುತ್ತವೆ ಎಂದು ತಿಳಿಸಿದರು.

ಶರಣರ ಚಿಂತನೆಗಳು ಒಂದು ಕಾಲಘಟ್ಟಕ್ಕೆ ಸೀಮಿತವಾಗದೆ, ಇಂದಿನ ಜಾಗತಿಕ ಸಮಾಜಕ್ಕೂ ಅನ್ವಯವಾಗುತ್ತವೆ. ಸಾಮಾಜಿಕ ಅಸಮಾನತೆ, ದ್ವೇಷ ಮತ್ತು ಭೇದಭಾವ ನಿವಾರಣೆಗೆ ಬಸವಣ್ಣನವರ ತತ್ವಗಳು ಪ್ರೇರಣೆಯಾಗಬಲ್ಲವು ಎಂದು ಅವರು ಹೇಳಿದರು. 'ಹಳ್ಳಿಗೊಂದು ವಚನದೀಪ' ಕಾರ್ಯಕ್ರಮದ ಮೂಲಕ ಗ್ರಾಮೀಣ ಭಾಗದ ಜನರಲ್ಲಿ ವಚನ ಸಾಹಿತ್ಯದ ಅರಿವು ಮೂಡಿಸುವುದು ಹಾಗೂ ಶರಣರ ಆದರ್ಶಗಳನ್ನು ಜನಜೀವನದೊಂದಿಗೆ ಬೆಸೆಯುವ ಕಾರ್ಯ ನಡೆಯುತ್ತಿದೆ.

ಹಳ್ಳಿಹಳ್ಳಿಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ವಚನ ಸಾಹಿತ್ಯದ ಮೌಲ್ಯಗಳು ಹೆಚ್ಚಿನ ಜನರನ್ನು ತಲುಪಲು ಸಾಧ್ಯವಾಗುತ್ತದೆ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ವಚನಗಳಲ್ಲಿರುವ ಸರಳತೆ, ಸಾಮಾಜಿಕ ಕಾಳಜಿ ಮತ್ತು ಮಾನವೀಯ ಮೌಲ್ಯಗಳು ಪ್ರತಿಯೊಬ್ಬರ ಜೀವನಕ್ಕೂ ದಾರಿದೀಪವಾಗಬೇಕು. ಶರಣರ ಸಂದೇಶಗಳನ್ನು ಕೇವಲ ಕೇಳುವುದಕ್ಕೆ ಸೀಮಿತಗೊಳಿಸದೆ, ಅವುಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂಬ ಕರೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಗಣ್ಯರು, ವಚನ ಸಾಹಿತ್ಯಾಸಕ್ತರು, ಗ್ರಾಮಸ್ಥರು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

# ರೈತರ ಬಗ್ಗೆ ಕಾಳಜಿ ಇರುವ ಸಚಿವ ಬಸವಂತಪ್ಪ ಅವರನ್ನು ದಾವಣಗೆರೆ ಜಿಲ್ಲಾ ಉಸ್ತುವಾರಿ ಮಾಡಲಿ: ಹರೀಶ್



ದಾವಣಗೆರೆ: ಜಿಲ್ಲೆಯ ಜನರು ಬರ ಹಾಗೂ ಬೆಳೆ ನಷ್ಟದಿಂದ ಸಂಕಷ್ಟದಲ್ಲಿರುವ ಸಂದರ್ಭದಲ್ಲಿ, ಬರ–ನೆರೆ ಅಧ್ಯಯನಕ್ಕೆ ಸರ್ಕಾರ ನೇಮಿಸಿರುವ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ವಿದೇಶ ಪ್ರವಾಸ ಕೈಗೊಂಡಿದ್ದಾರೆ ಎಂದು ಹರಿಹರ ಶಾಸಕ ಬಿ.ಪಿ. ಹರೀಶ್ ಟೀಕಿಸಿದರು. ಸೋಮವಾರ ನಗರದಲ್ಲಿ ನಡೆದ ರೈತರ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಜನರು ಬರ ಹಾಗೂ ಬೆಳೆಯಿಲ್ಲದೆ ಸಂಕಷ್ಟಕ್ಕೆ ಸಿಲುಕಿ ಒದ್ದಾಡುತ್ತಿರುವಾಗ ಸಚಿವರು ಮಜಾ ಮಾಡಲು ವಿದೇಶಕ್ಕೆ ಹೋಗಿದ್ದಾರೆ.

ಅವರು ಪದೇ ಪದೇ ವಿದೇಶಕ್ಕೆ ತೆರಳುತ್ತಲೇ ಇರುತ್ತಾರೆ. ಆದ್ದರಿಂದ ಸರ್ಕಾರ ಅವರ ಬದಲಿಗೆ ಯುವ ಸಚಿವ ಕೆ.ಎಸ್. ಬಸವಂತಪ್ಪ ಅವರನ್ನು ದಾವಣಗೆರೆ ಜಿಲ್ಲಾ ಉಸ್ತುವಾರಿಯನ್ನಾಗಿ ನೇಮಿಸಿದರೆ ರೈತರ ಒಂದಿಷ್ಟು ಸಮಸ್ಯೆಗಳಾದರೂ ಬಗೆಹರಿಯಲಿವೆ ಎಂದರು.

ಭದ್ರಾ ಅಚ್ಚುಕಟ್ಟಿನ ರೈತರಿಗೆ ಭತ್ತದ ಬೆಳೆ ಬೆಳೆಯಲು ನೀರು ಹರಿಸಬೇಕು. ನೀರಿಗಾಗಿ ರೈತರು ನಡೆಸುವ ಹೋರಾಟಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ. ಭತ್ತದ ಬೆಳೆಗೆ ನೀರು ನೀಡದಿದ್ದರೆ ವಿಧಾನಸಭೆ ಅಧಿವೇಶನದಲ್ಲಿಯೂ ಈ ವಿಚಾರವಾಗಿ ಹೋರಾಟ ನಡೆಸಲಾಗುವುದು. ಅಗತ್ಯಬಿದ್ದರೆ ವಿಧಾನಸೌಧದ ಬಳಿಯೂ ಪ್ರತಿಭಟನೆ ನಡೆಸುತ್ತೇವೆ ಎಂದು ಬಿ.ಪಿ. ಹರೀಶ್ ಎಚ್ಚರಿಸಿದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.